**ಸಂಪುಟ:** 04 **ಸಂಚಿಕೆ:** 54 **ಪುಟಗಳು:** 08 **ಬುಧವಾರ** 08 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ,ಅದನ್ನು ಎದುರಿಸಿ. ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ. ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕುಟುಂಬ ಸಮೇತರಾಗಿ ಕಾಗೇರಿ, ಅನಂತಕುಮಾರ್ ಹೆಗಡೆ ಮತದಾನ

• ಉದಯವಾಹಿನಿ, ಶಿರಸಿ

ಉತ್ತರಕನ್ನಡ ಸೇರಿ ಇಂದು ರಾಜ್ಯದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆದಿದ್ದು, ಟಿಕೆಟ್ ಹಂಚಿಕೆ ವಿಚಾರದಲ್ಲಿ ಭಾರಿ ಚರ್ಚೆಗೆ ಗುರಿಯಾಗಿದ್ದ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಹಾಲಿ ಸಂಸದ ಅನಂತ ಕುಮಾರ್ ಹೆಗಡೆ ಕುಟುಂಬ ಸಮೇತರಾಗಿ ಬಂದು ಮತದಾನ ಮಾಡಿದ್ದಾರೆ. ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ತಾವು ಕಲಿತ ಶಾಲೆ ಕುಳವೆ ಜನತಾ ವಿದ್ಯಾಲಯದಲ್ಲಿ ಪತ್ನಿ ಹಾಗೂ ಮೂವರು ಹೆಣ್ಣುಮಕ್ಕಳ ಸಮೇತರಾಗಿ ಬಂದು ಮತದಾನ ಮಾಡಿದ್ದಾರೆ. ಬಳಿಕ ಮಾತನಾಡಿದ ಅವರು ಇದೊಂದು ಬಹಳ ದೊಡ್ಡ ಉತ್ಸವ ಪ್ರಧಾನಿ ಮೋದಿ ಅವರು ದಾಖಲೆ ಅಭ್ಯರ್ಥಿಗಳ ಗೆಲುವಿನ ಜೊತೆ ಮತ್ತೊಮ್ಮೆ ಪ್ರಧಾನಿ ಆಗಲಿದ್ದಾರೆ ಎಂದು ಹೇಳಿದರು. ಇನ್ನು ಅನಂತಕುಮಾರ್ ಹೆಗಡೆ ಅವರು ಶಿರಸಿಯ ಕೆ ಹೆಚ್‌ಬಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸ್ಥಾಪಿಸಲಾದ ಮತಗಟ್ಟೆಯಲ್ಲಿ ಪತ್ನಿ ಜೊತೆ ಬಂದು 15 ನಿಮಿಷಗಳ ಕಾಲ ಕಾದು ಮತದಾನ ಮಾಡಿದ್ದಾರೆ.

## ಸೋಷಿಯಲ್ ಮೀಡಿಯಾಲ್ಲಿ ಬಿವೈಆರ್ ಬೆಂಬಲಿಸಿದ್ದಾರೆಂದು ಸುಳ್ಳು ಸುದ್ದಿ

• ಉದಯವಾಹಿನಿ, ಶಿವಮೊಗ್ಗ

ಲೋಕಸಭಾ ಕ್ಷೇತ್ರದ ಸ್ವತಂತ್ರ ಅಭ್ಯರ್ಥಿಯಾದ ನನ್ನ ವಿರುದ್ಧ ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ವದಂತಿಯನ್ನು ಹಬ್ಬಿಸಿದವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಜಿಲ್ಲಾ ಚುನಾವಣಾಧಿಕಾರಿಗಳಿಗೆ ದೂರು ನೀಡಿದ್ದಾರೆ. ನಾನು ಚುನಾವಣಾ ಕಣದಿಂದ ರಾಘವೇಂದ್ರರಿಗೆ ಬೆಂಬಲಿಸಿ ಹಿಂದೇ ಸರಿಯುತ್ತಿದ್ದೇನೆ ಎಂದು ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದು, ಅಪಪ್ರಚಾರ ಮಾಡುತ್ತಿದ್ದಾರೆ. ನಾನು ಬಿಜೆಪಿಯಲ್ಲಿದ್ದಾಗ ಪತ್ರಿಕಾಗೋಷ್ಠಿ ಮಾಡಿದ ಫೋಟೋಗಳನ್ನು ಹಿಂದೆ ರಾಘವೇಂದ್ರರಿಗೆ ಬೆಂಬಲಿಸಿ ಎಂದು ಹೇಳಿದ್ದನ್ನು ಈಗ ವಾಟ್ಸಾಪ್ ಫೇಸ್‌ಬುಕ್ ,ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸಿ ಮತದಾರರಲ್ಲಿ ಗೊಂದಲವನ್ನು ಸೃಷ್ಟಿಸುತ್ತಿದ್ದಾರೆ. ಇದು ಚುನಾವಣಾ ನೀತಿ ಸಂಹಿತೆಗೆ ವಿರುದ್ಧವಾಗಿದೆ. ಸಂಸದ ಬಿ.ವೈ.ರಾಘವೇಂದ್ರರಿಗೆ ತಾನು ಸೋಲುವುದು ಖಚಿತ ಎಂದು ತಿಳಿದಮೇಲೆ ನನ್ನ ಮೇಲೆ ಷಡ್ಯಂತ್ರ ರೂಪಿಸಿದ್ದಾರೆ. ಇದನ್ನು ಗಂಭೀರವಾಗಿ ಪರಿಗಣಿಸಿ ಕಾನೂನು ರೀತಿಯ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಡಿ.ಕೆ.ಶಿವಕುಮಾರ್ ವಿರುದ್ಧವೂ ತನಿಖೆಯಾಗಲಿ: ಪ್ರಲ್ಹಾದ ಜೋಶಿ

• ಉದಯವಾಹಿನಿ, ಹುಬ್ಬಳ್ಳಿ

ಪ್ರಜ್ವಲ್ ರೇವಣ್ಣ ಅವರ ಪೆನ್ ಡ್ರೈವ್ ಪ್ರಕರಣದ ಹಿಂದೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇದ್ದಾರೆ ಎಂದು ದೇವರಾಜೇಗೌಡ ಆರೋಪ ಮಾಡಿದ್ದಾರೆ. ಈ ಬಗ್ಗೆಯೂ ಎಸ್ ಐಟಿ ಸಮಗ್ರವಾಗಿ ತನಿಖೆ ನಡೆಸಬೇಕು ಎಂದು ಧಾರವಾಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪ್ರಲ್ಹಾದ ಜೋಶಿ ಒತ್ತಾಯಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜ್ವಲ್ ತಪ್ಪು ಮಾಡಿದ್ದಾರೆ. ಮೇಲ್ನೋಟಕ್ಕೆ ಅವರದ್ದು ಎನ್ನಲಾದ ವಿಡಿಯೊಗಳು ಹೊರಬಂದಿರುವುದು ಆಘಾತಕಾರಿ. ಅವರ ಬಗ್ಗೆ ಅನುಕಂಪ ಪಡುವ ಅಗತ್ಯ ಇಲ್ಲ ಎಂದರು. ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವುದು ಒಳ್ಳೆಯದು. ಸರ್ಕಾರ ಸಿಬಿಐಗೆ ಹೆದರುತ್ತಿದೆ. ರಾಜ್ಯ ಸರ್ಕಾರ ಸಿಬಿಐಗೆ ವಹಿಸದಿದ್ದರೆ ಸಂಬಂಧಪಟ್ಟವರು ನ್ಯಾಯಾಲಯಕ್ಕೆ ಹೋಗಿ ಸಿಬಿಐ ತನಿಖೆಗೆ ಒತ್ತಾಯಿಸಬೇಕು ಎಂದು ಹೇಳಿದರು. ಪ್ರಕರಣದಲ್ಲಿ ಮಹಿಳೆಯರಿಗೆ ಅನ್ಯಾಯವಾಗಿದೆ. ಅದರ ಕುರಿತು ಸಮಗ್ರ ತನಿಖೆಯಾಗಬೇಕು. ಯಾರನ್ನೂ ಟಾರ್ಗೆಟ್ ಮಾಡಬಾರದು ಎಂದರು. ನಮ್ಮ ಸರ್ಕಾರ ಇದ್ದಾಗ ಇಂತಹ ಪ್ರಕರಣ ನಡೆದಿರಲಿಲ್ಲ. ಹೀಗಾಗಿ ಸಿಬಿಐಗೆ ವಹಿಸುವ ಪ್ರಶ್ನೆಯೇ ಬರಲಿಲ್ಲ. ಈಗ ರಾಜ್ಯ ಸರ್ಕಾರ ಪ್ರಕರಣವನ್ನು ಸಿಬಿಐಗೆ ವಹಿಸಲು ಏಕೆ ಹೆದರುತ್ತಿದೆ. ಸಿಬಿಐ ಸ್ವತಂತ್ರವಾಗಿ ತನಿಖೆ ನಡೆಸುತ್ತದೆ. ಅನ್ಯಾಯದಿಂದ ಆರೋಪ ಮಾಡಿದ್ದರೆ ಅನೇಕ ಪ್ರಕರಣಗಳಲ್ಲಿ ಕ್ಲೀನ್ ಚಿಟ್ ಸಹ ನೀಡಿದೆ ಎಂದು ಹೇಳಿದರು.

## ಡಿಸಿಎಂ ವಿರುದ್ಧ ಬೆಂಗಳೂರಿನ ವಿವಿಧೆಡೆ ಪೋಸ್ಟರ್

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಸಿಎಂ ಡಿಕೆಶಿ ಕೈವಾಡವಿದೆ ಎಂದು ವಕೀಲ, ಬಿಜೆಪಿ ಮುಖಂಡ ದೇವರಾಜೇಗೌಡ ಗಂಭೀರ ಆರೋಪ ಮಾಡಿದ್ದಾರೆ. ಪೆನ್ ಡ್ರೈವ್ ಪ್ರಕರಣದಲ್ಲಿ ಡಿಕೆಶಿ ಪಾತ್ರವಿದೆ ಎಂದು ಆರೋಪಿಸಿರುವ ಬೆನ್ನಲ್ಲೇ ರಾಜಧಾನಿ ಬೆಂಗಳೂರಿನ ವಿವಿಧೆಡೆ ಡಿಸಿಎಂ ವಿರುದ್ಧ ಪೋಸ್ಟರ್ ಅಂಟಿಸಲಾಗಿದೆ. ಬೆಂಗಳೂರು ನಗರದ ವಿವಿಧ ಸ್ಥಳಗಳಲ್ಲಿ ರಾತ್ರಿ ಬೆಳಗಾಗುವಷ್ಟರಲ್ಲಿ ಡಿ.ಕೆ.ಶಿವಕುಮಾರ್ ವಿರುದ್ಧ ಪೋಸ್ಟರ್‌ಗಳು ಪ್ರತ್ಯಕ್ಷವಾಗಿವೆ. ಲುಲು ಮಾಲ್, ಕೆಪಿಸಿಸಿ ಕಚೇರಿ ಸೇರಿದಂತೆ ಬೆಂಗಳೂರಿನ ವಿವಿಧೆಡೆಗಳಲ್ಲಿ ಡಿಸಿಎಂ ಡಿಕೆಶಿ, ಸಿಎಂ ಸಿದ್ದರಾಮಯ್ಯ ವಿರುದ್ಧ ಪೋಸ್ಟರ್‌ಗಳನ್ನು ಅಂಟಿಸಲಾಗಿದೆ.

**ಮಂಗಳವಾರ ಉತ್ತರ ಕರ್ನಾಟಕದ ಮತದಾನ ಮುಕ್ತಾಯವಾಗಿದೆ. ಲೋಕಸಭೆ ಚುನಾವಣೆಯಲ್ಲಿ ಅಭ್ಯರ್ಥಿಗಳ ಗೆಲುವಿಗೆ ತಮ್ಮ ಕ್ಷೇತ್ರಗಳಿಂದ ಕಳೆದ ಬಾರಿಗಿಂತ ಈ ಸಲ ಹೆಚ್ಚು ಲೀಡ್ ಕೊಡಬೇಕೆಂಬ ಛಲದೊಂದಿಗೆ ಲೀಡರ್‌ಗಳಿಗೆ ಹೆಚ್ಚು ಮತ ಗಳಿಸುವುದು ಚಿಂತೆಯಾಗಿದೆ. ಕುರುಕ್ಷೇತ್ರದಲ್ಲಿ ಕರ್ಣಾರ್ಜುನರ ಯುದ್ಧದಲ್ಲಿ ಸಮಬಲದ ಹೋರಾಟ ನಡೆದ ಮಾದರಿಯಲ್ಲೇ ಈ ಬಾರಿ ಉತ್ತರ ಕರ್ನಾಟಕದಲ್ಲೂ ಲೋಕ ಸಮರ ರಾಜ್ಯದ 2ನೇ ಹಂತದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ಬಿರುಸಿನಿಂದ ಆರಂಭಗೊಂಡು ಬಹುತೇಕ ಶಾಂತಿಯುತವಾಗಿ ನಡೆಯಿತು. ಬೆಳಗ್ಗೆ 7 ಗಂಟೆಗೆ ಮತದಾನ ಆರಂಭಗೊಂಡಿತು. ಹಲವು ಮತಗಟ್ಟೆಗಳಲ್ಲಿ ಸಾಲುಗಟ್ಟಿ ಮತ ಚಲಾಯಿಸುತ್ತಿದ್ದ ದೃಶ್ಯ ಕಂಡುಬಂದಿತು. ಯುವ ಮತದಾರರು ಉತ್ಸಾಹದಿಂದ ಮತದಾನ ಮಾಡುತ್ತಿರುವುದು ಅಲ್ಲಲ್ಲಿ ಕಂಡುಬಂದಿತು. ಕೆಲವೊಂದು ಸಣ್ಣಪುಟ್ಟ ಘಟನೆಗಳನ್ನು ಹೊರತು ಪಡಿಸಿದರೆ ಶಾಂತಿಯುತವಾಗಿ ಮತದಾನ ನಡೆದಿದೆ.**

# 'ಉತ್ತರಾ'ಧಿಕಾರಿ ಯಾರು?

## ಯಾರಿಗೆ ವರದಾನ..! ಯಾರಿಗೆ ಸಮಾಧಾನ





**ಜೂ. 4ರಂದು ಮತ ಎಣಿಕೆ**

**ಕರ್ನಾಟಕದಲ್ಲಿ 70.41% ಮತದಾನ.. ಚಿಕ್ಕೋಡಿಯಲ್ಲಿ ಗರಿಷ್ಠ ಕಲಬುರಗಿಯಲ್ಲಿ ಕನಿಷ್ಠ**

**2ನೇ ಹಂತ ಮತದಾನ ಶಾಂತಿಯುತ**

| ಎಲ್ಲೆಲ್ಲಿ - ಎಷ್ಟೆಷ್ಟು | |
|---|---|
| ಬಾಗಲಕೋಟೆ | 72.64 |
| ಬಳ್ಳಾರಿ | 73.56 |
| ಬೀದರ್ | 65.13 |
| ಚಿಕ್ಕೋಡಿ | 78.51 |
| ದಾವಣಗೆರೆ | 77 |
| ಕಲಬುರಗಿ | 62.17 |
| ಕೊಪ್ಪಳ | 70.94 |
| ಶಿವಮೊಗ್ಗ | 78.24 |
| ವಿಜಯಪುರ | 66.32 |
| ಧಾರವಾಡ | 74.35 |
| ಹಾವೇರಿ | 77.57 |
| ರಾಯಚೂರು | 64 |
| ಬೆಳಗಾವಿ | 71.26 |
| ಉತ್ತರಕನ್ನಡ | 73.52 |

• ಉದಯವಾಹಿನಿ, ಬೆಂಗಳೂರು

ಮಂಗಳವಾರ ಉತ್ತರ ಕರ್ನಾಟಕದ ಮತದಾನ ಮುಕ್ತಾಯವಾಗಿದೆ. ಲೋಕಸಭೆ ಚುನಾವಣೆಯಲ್ಲಿ ಅಭ್ಯರ್ಥಿಗಳ ಗೆಲುವಿಗೆ ತಮ್ಮ ಕ್ಷೇತ್ರಗಳಿಂದ ಕಳೆದ ಬಾರಿಗಿಂತ ಈ ಸಲ ಹೆಚ್ಚು ಲೀಡ್ ಕೊಡಬೇಕೆಂಬ ಛಲದೊಂದಿಗೆ ಲೀಡರ್‌ಗಳಿಗೆ ಹೆಚ್ಚುಮತಗಳಿಸುವುದು ಚಿಂತೆಯಾಗಿದೆ. ಕುರುಕ್ಷೇತ್ರದಲ್ಲಿ ಕರ್ಣಾರ್ಜುನರ ಯುದ್ಧದಲ್ಲಿ ಸಮಬಲದ ಹೋರಾಟ ನಡೆದ ಮಾದರಿಯಲ್ಲೇ ಈ ಬಾರಿ ಉತ್ತರ ಕರ್ನಾಟಕದಲ್ಲೂ ಲೋಕ ಸಮರ ರಾಜ್ಯದ 2ನೇ ಹಂತದ 14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ಬಿರುಸಿನಿಂದ ಆರಂಭಗೊಂಡು ಬಹುತೇಕ ಶಾಂತಿಯುತವಾಗಿ ನಡೆಯಿತು. ಬೆಳಗ್ಗೆ 7 ಗಂಟೆಗೆ ಮತದಾನ ಆರಂಭಗೊಂಡಿತು. ಹಲವು ಮತಗಟ್ಟೆಗಳಲ್ಲಿ ಸಾಲುಗಟ್ಟಿ ಮತ ಚಲಾಯಿಸುತ್ತಿದ್ದ ದೃಶ್ಯ ಕಂಡುಬಂದಿತು. ಯುವ ಮತದಾರರು ಉತ್ಸಾಹದಿಂದ ಮತದಾನ ಮಾಡುತ್ತಿರುವುದು ಅಲ್ಲಲ್ಲಿ ಕಂಡುಬಂದಿತು. ಕೆಲವೊಂದು ಸಣ್ಣಪುಟ್ಟ ಘಟನೆಗಳನ್ನು ಹೊರತು ಪಡಿಸಿದರೆ ಈತನಕ ಶಾಂತಿಯುತವಾಗಿ ಮತದಾನ ನಡೆದಿದೆ. ಗ್ರಾಮೀಣ ಭಾಗದಲ್ಲಿ ಬಿರುಸಿನ ಮತದಾನವಾಗುತ್ತಿರುವುದು ಕಂಡುಬಂದಿತು. ನಗರ ಪ್ರದೇಶಗಳಲ್ಲಿ ಅಷ್ಟು ಉತ್ಸಾಹ ಕಂಡುಬರಲಿಲ್ಲ.

ಗ್ರಾಮೀಣ ಭಾಗದಲ್ಲಿ ಕೃಷಿ ಮತ್ತಿತರ ಚಟುವಟಿಕೆಗಳಲ್ಲಿ ತೊಡಗಿಸಬೇಕಾದವರು ಬೆಳಗ್ಗೆಯೇ ಮತ ಚಲಾಯಿಸಿ ತಮ್ಮ ಕೆಲಸ ಕಾರ್ಯಗಳಿಗೆ ತೆರಳಿದರು. 21 ಮಹಿಳೆಯರು ಸೇರಿ ಒಟ್ಟು 227 ಅಭ್ಯರ್ಥಿಗಳ ಭವಿಷ್ಯ ಮತದಾರರು ನಿರ್ಧರಿಸಿದ್ದಾರೆ. ಇಬ್ಬರು ಕೇಂದ್ರ ಸಚಿವರು, ಇಬ್ಬರು ಮಾಜಿ ಮುಖ್ಯಮಂತ್ರಿಗಳು, ನಾಲ್ವರು ಸಚಿವರ ಮಕ್ಕಳು, ಓರ್ವ ಸಚಿವರ ಸಹೋದರಿ, ಸಚಿವರೊಬ್ಬರ ಪತ್ನಿ, ಹಾಲಿ ಸಂಸದರ ಪತ್ನಿ , ರಾಷ್ಟ್ರೀಯ ಪಕ್ಷವೊಂದರ ರಾಷ್ಟ್ರೀಯ ಅಧ್ಯಕ್ಷರ ಅಳಿಯ ಚುನಾವಣಾ ಕಣದಲ್ಲಿ ಇದ್ದಾರೆ. ಬೆಳಗ್ಗೆ ಬಿರುಸಿನಿಂದ ಆರಂಭಗೊಂಡ ಮತದಾನವು ಮಧ್ಯಾಹ್ನವಾಗುತ್ತಿದ್ದಂತೆ ಕಡಿಮೆಯಾಯಿತು. ಬೇಸಿಗೆಯ ಬಿರುಬಿಸಿಲಿನಿಂದಾಗಿ ಮಧ್ಯಾಹ್ನದ ವೇಳೆ ಮತದಾನ ಮಾಡಲು ಅಷ್ಟಾಗಿ ಆಸಕ್ತಿ ತೋರದಿರುವುದು ಕಂಡುಬಂತು. ಸಂಜೆಯಾಗುತ್ತಿದ್ದಂತೆ ಮತ್ತೆ ಮತದಾನ ಬಿರುಸಾಗತೊಡಗಿತು. 2ನೇ ಹಂತದ ಮತದಾನ ನಡೆದಿರುವ 14 ಕ್ಷೇತ್ರಗಳಲ್ಲಿ 227 ಅಭ್ಯರ್ಥಿಗಳ ರಾಜಕೀಯ ಭವಷ್ಯ ಮತದಾರ ಇವಿಎಂನ ಬಟನ್ ಒತ್ತುವ ಮೂಲಕ ನಿರ್ಧಾರ ಮಾಡಿದ್ದು,ಮತದಾರರ ತೀರ್ಪು ಏನೆಂಬುದು ಮತ ಎಣಿಕೆ ನಡೆಯುವ ಜೂ. 4ರಂದು ಬಹಿರಂಗವಾಗಲಿದೆ. 14 ಲೋಕಸಭಾ ಕ್ಷೇತ್ರಗಳ ಮತದಾನ ಎಲ್ಲೆಡೆ ಶಾಂತಿಯುತವಾಗಿ ನಡೆದಿದ್ದು, ಮತಗಟ್ಟೆಗಳಿಗೆ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದ್ದು, ಎಲ್ಲೂ ಅಹಿತಕರ ಘಟನೆಗಳು ನಡೆದ ಬಗ್ಗೆ ವರದಿಯಾಗಿಲ್ಲ ನಡೆದಿರುವ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಜಗದೀಶ್‌ಶೆಟ್ಟರ್,ಬಸವರಾಜ ಬೊಮ್ಮಾಯಿ ಇವರುಗಳು ಮತ ಚಲಾಯಿಸಿದ್ದು, ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ, ಭಗವಂತ ಕೂಬಾ ಸೇರಿ ಹಲವು ಗಣ್ಯರು ತಮ್ಮ ಹಕ್ಕು ಚಲಾಯಿಸಿದ್ದಾರೆ.

### ಘಟಾನುಘಟಿಗಳ ಭವಿಷ್ಯ

2ನೇ ಹಂತದ ಚುನಾವಣೆಯಲ್ಲಿ ಮಾಜಿ ಮುಖ್ಯಮಂತ್ರಿ ಬೊಮ್ಮಾಯಿ, ಜಗದೀಶ್‌ಶೆಟ್ಟರ್, ಕೇಂದ್ರ ಸಚಿವ ಪ್ರಲ್ಹಾದ್‌ಜೋಷಿ, ಭಗವಂತಕೂಬಾ, ಯಡಿಯೂರಪ್ಪಪುತ್ರ ಬಿವೈ ವಿಜಯೇಂದ್ರ, ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಪತ್ನಿ ಡಾ. ಪ್ರಭಾಮಲ್ಲಿಕಾರ್ಜುನ್, ಸಚಿವರಾದ ಲಕ್ಷ್ಮಿಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್, ಸತೀಶ್ ಜಾರಕಿಹೊಳಿ ಪುತ್ರಿ ಪ್ರಿಯಾಂಕ ಜಾರಕಿಹೊಳಿ, ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ ಪಾಟೀಲ್, ಸಚಿವ ಈಶ್ವರ್ ಖಂಡ್ರೆ, ಪುತ್ರ ಸಾಗರ್ ಖಂಡ್ರೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅಳಿಯ ರಾಧಾಕೃಷ್ಣದೊಡ್ಡಮನಿ, ಮಾಜಿ ಸಚಿವ ಕೆ.ಎಸ್ ಈಶ್ವರಪ್ಪ, ದಿ.ಮಾಜಿ ಮುಖ್ಯಮಂತ್ರಿ ಬಂಗಾರಪ್ಪ ಅವರ ಪುತ್ರಿ, ನಟ ಶಿವರಾಜ್‌ಕುಮಾರ್ ಪತ್ನಿ ಗೀತಾಶಿವರಾಜ್‌ಕುಮಾರ್ ಸೇರಿ 227 ಅಭ್ಯರ್ಥಿಗಳ ರಾಜಕೀಯ ಭವಿಷ್ಯಕ್ಕೆ ಮತದಾರ ಮುದ್ರೆ ಒತ್ತಿದ್ದಾನೆ.

1 ಕಳೆದ ಬಾರಿ ಉತ್ತರ ಕರ್ನಾಟಕದ 14 ಕ್ಷೇತ್ರಗಳಲ್ಲಿ ಜಯಭೇರಿ ಬಾರಿಸಿದ್ದ ಬಿಜೆಪಿ

2 ಈ ಬಾರಿ ಹಿಂದಿನಂತಿಲ್ಲ , ಕಲ್ಯಾಣ, ಕಿತ್ತೂರು ಸೀಮೆಯಲ್ಲಿ ಭಿನ್ನವಾಗಿದೆ ಪರಿಸ್ಥಿತಿ

3 ಕಮಲದ ಭದ್ರಕೋಟೆ ಭೇದಿಸಲು ನಡೆಸುತ್ತಿದೆ ಕಾಂಗ್ರೆಸ್ ಪಡೆ ತೀವ್ರ ಪೈಪೋಟಿ

### ಮತ ಚಲಾಯಿಸಲು ಬಂದವರಿಗೆ ತಂಪು ಪಾನೀಯ

14 ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆದಿದ್ದು, ಬೆಳಿಗ್ಗೆ 7 ಗಂಟೆಗೆ ಮತದಾನ ಆರಂಭವಾಗಿದ್ದು,ಮತದಾರರು ಉತ್ಸಾಹದಿಂದಲೇ ಮತಗಟ್ಟೆಗೆ ಬಂದು ತಮ್ಮ ಹಕ್ಕು ಚಲಾಯಿಸುತ್ತಿದ್ದ ದೃಶ್ಯ ಎಲ್ಲೆಡೆ ಸಾಮಾನ್ಯವಾಗಿತ್ತು. ಬಿರು ಬಿಸಿಲಿನ ಕಾರಣ ಹಲವೆಡೆ ಮತದಾರರಿಗೆ ತಂಪು ಪಾನೀಯ ವ್ಯವಸ್ಥೆ ಮಾಡಲಾಗಿದ್ದು, ಪೆಂಡಾಲ್ ಹಾಕಿ ಬಿಸಿಲಿನ ಝಳದಿಂದ ಜನರನ್ನು ರಕ್ಷಿಸುವ ವ್ಯವಸ್ಥೆ ಮಾಡಲಾಗಿದೆ. ಗಂಗಾವತಿ ತಾಲ್ಲೂಕಿನ ವಡ್ಡರಹಟ್ಟಿಯ ಸಖಿ ಮತಗಟ್ಟೆಯಲ್ಲಿ ಮತ ಚಲಾಯಿಸಲು ಬಂದವರಿಗೆ ತಂಪು ಪಾನೀಯ ನೀಡಲಾಗಿದೆ.

### ಮತಯಂತ್ರ ದೋಷ

ಗದಗ ಜಿಲ್ಲೆಯ ಲಕ್ಷ್ಮೇಶ್ವರದ 4 ಮತಗಟ್ಟೆಗಳಲ್ಲಿ ಮತಯಂತ್ರದ ದೋಷ ಕಂಡು ಬಂದಿದ್ದು, ಮತಯಂತ್ರವನ್ನು ಬದಲಿಸಿ ಮತದಾನಕ್ಕೆ ಅವಕಾಶ ಮಾಡಿಕೊಡಲಾಗಿದೆ. ಇದರಿಂದ ಮತದಾನ ತಡವಾಗಿ ಆರಂಭಗೊಂಡಿದೆ. ಶಿವಮೊಗ್ಗ ಲೋಕಸಭಾ ಕ್ಷೇತ್ರದ ಹೊಸನಗರ ತಾಲ್ಲೂಕಿನ ಸುಳುಗೋಡು ಗ್ರಾಮದ ಮತಗಟ್ಟೆಯಲ್ಲೂ ಮತಯಂತ್ರ ದೋಷದಿಂದ ಮತದಾನ 1 ಗಂಟೆ ವಿಳಂಬವಾಗಿ ಆರಂಭವಾಗಿದೆ ಬೀದರ್ ನಗರದ ನ್ಯಾಷನಲ್ ಕಾಲೇಜಿನ ಮತಗಟ್ಟೆಯಲ್ಲಿ ಮತಯಂತ್ರದ ದೋಷ ಕಂಡು ಬಂದ ಹಿನ್ನೆಲೆಯಲ್ಲಿ ಮತದಾನ ತಡವಾಗಿದ್ದು, ಮತದಾರರು ಚುನಾವಣಾಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಪ್ರಸಂಗವೂ ನಡೆದಿದೆ. ರಾಯಚೂರಿನ ಸಿಂಧನೂರು ತಾಲ್ಲೂಕಿನ ಕಲ್ಮಂಗಿ ಮತಗಟ್ಟೆಯಲ್ಲೂ ಮತಯಂತ್ರ ದೋಷದಿಂದ ಮತದಾನ ಅರ್ಧ ಗಂಟೆ ವಿಳಂಬವಾಯಿತು.

### ಶತಾಯುಷಿಗಳ ಮತದಾನ


ಇಂದಿನ ಮತದಾನದಲ್ಲಿ ಮತದಾರರು ಉತ್ಸಾಹದಿಂದಲೇ ಮತ ಹಾಕುತ್ತಿದ್ದು, ಬಾಗಲಕೋಟೆ ಮತ್ತು ಬೀದರ್‌ನಲ್ಲಿ ಶತಾಯುಷಿಗಳು ಮತದಾನ ಮಾಡುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ. ಬಾಗಲಕೋಟೆಯ ಬೀಳಗಿ ಪಟ್ಟಣದ 104 ವರ್ಷದ ಸಿದ್ದವ್ವ ಸಿದ್ದಪ್ಪ ಜಗ್ಗಲ ಇವರು ಸಖಿ ಬೂತ್‌ನಲ್ಲಿ ಮತದಾನ ಮಾಡಿದರು. ಹಾಗೆಯೇ, ಬೀದರ್ ನಗರದ 100 ವರ್ಷದ ಸುಭದ್ರಾಬಾಯಿ ಸಹ ಮಗನ ಸಹಾಯದಿಂದ ಮತಗಟ್ಟೆಗೆ ಬಂದು ಮತ ಹಾಕಿ ಮತದಾನದ ಖುಷಿ ಹಂಚಿಕೊಂಡರು. ಗದಗ ತಾಲ್ಲೂಕಿನ ಶಿರುಂಜಾ ಗ್ರಾಮದ ಶತಾಯುಷಿ ವೀರಮ್ಮ ಗುಡ್ಡದ ಇವರು ಮೊಮ್ಮಕ್ಕಳ ಸಹಾಯದಿಂದ ಮತಗಟ್ಟೆಗೆ ಬಂದು ಮತ ಹಾಕಿದರು.

### ಮತದಾನ ಬಹಿಷ್ಕಾರ

ಪಟ್ಟಣದ ಗುದ್ನೆಪ್ಪನ ದೇವಸ್ಥಾನದ ಜಾಗದಲ್ಲಿ ಸರ್ಕಾರಿ ಕಟ್ಟಡ ಕಟ್ಟುವ ಆದೇಶ ಹಿಂಪಡೆಯಬೇಕು ಎಂದು ಆಗ್ರಹಿಸಿ ಮತದಾನವನ್ನು ಬಹಿಷ್ಕಾರಿಸಿದ್ದಾರೆ. ಕೊಪ್ಪಳ ಕ್ಷೇತ್ರದ ಕುಷ್ಟಗಿ ತಾಲ್ಲೂಕಿನ ತಾವರಗೇರ ಪಟ್ಟಣದ ವಿಠಲಾಪುರ ಬಡಾವಣೆ ನಿವಾಸಿಗಳು ಮತದಾನ ಬಹಿಷ್ಕಾರ ಮಾಡಿದ್ದು, ವಾರದ ಹಿಂದೆ ಇದೇ ಬಡಾವಣೆಯ ನಿವಾಸಿ ಲಕ್ಷ್ಮಿ ಎಂಬುವರು ಹೆರಿಗೆ ಸಮಯದಲ್ಲಿ ಮೃತಪಟ್ಟಿದ್ದು, ನವಜಾತ ಶಿಶುಕೂಡ ಮೃತಪಟ್ಟಿತ್ತು. ಇದು ವೈದ್ಯರ ನಿರ್ಲಕ್ಷ್ಯದಿಂದ ಆಗಿದೆ. ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳುವಂತೆ ಆಗ್ರಹಿಸಿ ನಿವಾಸಿಗಳು ಮತದಾನ ಬಹಿಷ್ಕರಿಸಿದ್ದಾರೆ.

## ಶೀಘ್ರದಲ್ಲಿಯೇ ಮತ್ತೊಂದು ಸಿಡಿ ಫ್ಯಾಕ್ಟರಿ ಓಪನ್ ಆಗಲಿದೆ

• ಉದಯವಾಹಿನಿ, ವಿಜಯಪುರ



ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೊಸ ಬಾಂಬ್ ಸಿಡಿಸಿದ್ದಾರೆ. ನಾನು ಈ ಹಿಂದೆಯೇ ಭವಿಷ್ಯ ಹೇಳಿದ್ದೆ. ರಾಜ್ಯದಲ್ಲಿ ಎರಡು ಸಿಡಿ ಫ್ಯಾಕ್ಟರಿಗಳಿವೆ ಎಂದು ಈಗ ಒಂದು ಓಪನ್ ಆಗಿದೆ.ಮತ್ತೊಂದು ಶೀಘ್ರದಲ್ಲಿ ಓಪನ್ ಆಗಲಿದೆ ಎಂದು ಹೇಳಿದ್ದಾರೆ.

ಅದು ಯಾರದ್ದು, ಯಾರಿಗೆ ಸಂಬಂಧಿಸಿದ್ದು ಎಂಬುದು ಶೀಘ್ರ ಗೊತ್ತಾಗಲಿದೆ ಎಂದಿದ್ದಾರೆ. ಪ್ರಜ್ವಲ್ ಅಶ್ಲೀಲ ವಿಡಿಯೋ ಬಹಿರಂಗ ಹಿಂದೆ ಡಿಸಿಎಂ ಡಿ.ಕೆ.ಶಿವಕುಮಾರ್ ಕೈವಾಡವಿದೆ ಎಂದು ವಕೀಲ ದೇವರಾಜೇಗೌಡ ಹೇಳಿಕೆ ನೀಡಿದ್ದಾರೆ. ಇದರ ಹಿಂದೆ ಡಿಕೆಶಿ ಕೈವಾಡವಿರುವುದು ಸ್ಪಷ್ಟ. ಎಸ್ ಐಟಿ ಸಂಪೂರ್ಣವಾಗಿ ಡಿ.ಕೆ.ಶಿ ವಶದಲ್ಲಿದೆ. ಅವರ ಅಣತಿಯಂತೆ ಕೆಲಸ ಮಾಡ್ತಾರೆ. ಹೀಗಿರುವಾಗ ಎಸ್‌ಐಟಿಯಿಂದ ಸೂಕ್ತ ತನಿಖೆಯಾಗುವುದು ಅನುಮಾನ ಎಂದು ಹೇಳಿದರು.

## ಸಿಎಂ, ಪರಮೇಶ್ವರ್ ಸಿಡಿಯೂ ಬರಬಹುದು

• ಉದಯವಾಹಿನಿ, ಬೆಳಗಾವಿ

ಇಂದು ಒಬ್ಬರ ಸಿಡಿ ಹೊರಬಂದಿದೆ. ಮುಂದೆ ಸಿದ್ದರಾಮಯ್ಯ ಸಿಡಿಯೂ ಹೊರಬರಬಹುದು ಎಂದು ರಮೇಶ್ ಜಾರಕಿಹೊಳಿ ಹೇಳಿದ್ದಾರೆ. ಮೊದಲಿನಿಂದಲೂ ನಾನು ಸಿಡಿ ಬಗ್ಗೆ ಹೇಳಿಕೊಂಡೇ ಬಂದಿದ್ದೇನೆ. ಆಗ ಎಲ್ಲಾರೂ ನನ್ನ ಮಾತು ನಿರ್ಲಕ್ಷ್ಯ ಮಾಡಿದರು.

ಇಂದು ಒಬ್ಬರಿಗೆ ಆಗಿದೆ. ಮುಂದೆ ಸಿದ್ದರಾಮಯ್ಯ, ಪರಮೇಶ್ವರ್ ಅವರಿಗೂ ಆಗಬಹುದು ಅವರ ಸಿಡಿಯೂ ಹೊರಬರಬಹುದು ಹಾಗಾಗಿ ಈ ನಿಟ್ಟಿನಲ್ಲಿ ಎಲ್ಲಾದಕ್ಕೂ ಅಂತ್ಯ ಹಾಡಬೇಕು ಎಂದು ಹೇಳಿದರು. ನಾನು ಸಿಎಂ ಸಿದ್ದರಾಮಯ್ಯನವರಿಗೆ, ಗೃಹ ಸಚಿವ ಪರಮೇಶ್ವರ್ ಅವರಿಗೆ ಕೈಮುಗಿದು ಕೇಳಿಕೊಳ್ಳುತ್ತೇನೆ. ಪಕ್ಷಾತೀತವಾಗಿ ಇಂತಹ ಪ್ರಕರಣಗಳಿಗೆ ಇತಿಶ್ರೀ ಹಾಡಬೇಕು ಎಂದು ಮನವಿ ಮಾಡಿದರು.

# ಸೂಕ್ತ ತನಿಖೆ ಮಾಡದ ಎಸ್‌ಐಟಿ ಹೆಚ್‌ಡಿಕೆ!

## ಸಂತ್ರಸ್ತೆಯರಿಗೆ ನ್ಯಾಯ ಕೊಡಿಸುವ ಉದ್ದೇಶವಿದ್ದರೆ ವಿಡಿಯೋ ಹರಿಯಬಿಟ್ಟವರನ್ನು ಯಾಕೆ ಬಂಧಿಸಿಲ್ಲ?

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿಯಿಂದ ಸೂಕ್ತ ತನಿಖೆ ನಡೆಯುತ್ತಿಲ್ಲ ಎಂದು ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಹೇಳಿದ್ದಾರೆ.

ಎಸ್‌ಐಟಿ ಎಂಬುದು ಈಗ ಸಿದ್ದರಾಮಯ್ಯ ಇನ್ವೆಸ್ಟಿಗೇಷನ್ ಟೀಮ್ ಮತ್ತು ಶಿವಕುಮಾರ್ ಇನ್ವೆಸ್ಟಿಗೇಷನ್ ಟೀಮ್ ಆಗಿದೆ. ನಿಜವಾಗಿ ಸಂತ್ರಸ್ತೆಯರಿಗೆ ನ್ಯಾಯ ಕೊಡಿಸುವ ಉದ್ದೇಶ ಅವರದ್ದಾಗಿದ್ದರೆ ವಿಡಿಯೋ ಹರಿಯಬಿಟ್ಟವರನ್ನು ಯಾಕೆ ಇನ್ನೂ ಬಂಧಿಸಿಲ್ಲ ಆ ವಿಚಾರವಾಗಿ ದೂರು ನೀಡಿದ್ದರೂ ಯಾಕೆ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದರು. ಪ್ರಜ್ವಲ್ ಪ್ರಕರಣದಲ್ಲಿ 16 ವರ್ಷ ವಯಸ್ಸಿನ ಬಾಲಕಿಯೂ ಸಂತ್ರಸ್ತೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬಹಿರಂಗವಾಗಿ ಹೇಳಿದ್ದಾರೆ. ಯಾವ ಆಧಾರದ ಮೇಲೆ ರಾಹುಲ್ ಗಾಂಧಿ ಆ ಹೇಳಿಕೆ ನೀಡಿದರು ಆ ಬಗ್ಗೆ ಎಸ್‌ಐಟಿ ಯಾಕೆ ಇನ್ನೂ ತನಿಖೆ ಮಾಡಿಲ್ಲ 400 ಮಹಿಳೆಯರನ್ನು ಅತ್ಯಾಚಾರ ಮಾಡಲಾಗಿದೆ ಎನ್ನುತ್ತಾರೆ. ಹಾಗಾದರೆ ಯಾಕೆ ರಾಹುಲ್ ಗಾಂಧಿಯವರನ್ನು ಇನ್ನು ಬಿಟ್ಟಿದ್ದಾರೆ ಎಂದು ಕುಮಾರಸ್ವಾಮಿ ಪ್ರಶ್ನಿಸಿದರು. 2,900 ಕೇಸ್ ಇದೆ ಎಂದು ಹೇಳುತ್ತಾರೆ. ಆದರೂ ಒದ್ದಾಡುತ್ತಾರೆ. ಯಾವ ಸಂತ್ರಸ್ತೆಯರೂ ಸಿಗುತ್ತಿಲ್ಲ ಎಂದು ಒದ್ದಾಡುತ್ತಿದ್ದಾರೆ. ಆ ಸಂತ್ರಸ್ತೆಯರಿಗೆ ಏನು ಸ್ಥೈರ್ಯ ತುಂಬುತ್ತೀರಿ ನೀವು ಎಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

**ಪ್ರಜ್ವಲ್ ಅಶ್ಲೀಲ ವಿಡಿಯೋ ಪ್ರಕರಣ**



ನಾನು ಪ್ರಜ್ವಲ್ ರೇವಣ್ಣರನ್ನ ವಹಿಸಿಕೊಂಡು ಮಾತನಾಡುತ್ತಿಲ್ಲ. ಒಂದು ತನಿಖೆ ಪ್ರಾರಂಭ ಮಾಡಿದಾಗ ಮಾಹಿತಿ ಸೋರಿಕೆ ಆಗಬಾರದು. ಸರ್ಕಾರಕ್ಕೆ, ಸಂತ್ರಸ್ತೆಯರಿಗೆ ರಕ್ಷಣೆ ಕೊಡುವುದು ಬೇಕಾಗಿಲ್ಲ. ಈ ಸರ್ಕಾರಕ್ಕೆ ಬೇಕಾಗಿರುವುದು ಕೇವಲ ಪ್ರಚಾರ ಅಷ್ಟೇ. ಏ.22ರಂದು ಬೇಲೂರಿನಲ್ಲಿ ಚುನಾವಣಾ ಪ್ರಚಾರ ಸಭೆ ನಡೆಯಿತು. ಏ.22ರಂದು ಪ್ರಜ್ವಲ್ ಪಕ್ಕದಲ್ಲಿ ಕುಳಿತ ಹೆಣ್ಣು ಮಗಳು ಯಾರು ಏ.21ರಂದು ಬಿಡುಗಡೆಯಾದ ವಿಡಿಯೋದಲ್ಲಿರುವುದು ಯಾರು ಅತ್ಯಾಚಾರ ಆಗಿದ್ರೆ, ಆ ಹೆಣ್ಮಗಳು ಯಾಕೆ ಒಂದೇ ವೇದಿಕೆಯಲ್ಲಿ ಇರುತ್ತಿದ್ದರು ಪ್ರಜ್ವಲ್ ಪಕ್ಕ ಆ ಹೆಣ್ಣು ಮಗಳು ಯಾಕೆ ಕುಳಿತುಕೊಳ್ಳುತ್ತಿದ್ದರು ಎಂದು ಪ್ರಶ್ನಿಸಿದರು. ವೈರಲ್ ಆಗಿರುವ ವೀಡಿಯೋದಲ್ಲಿ ಯಾರೇ ಇದ್ರೂ ಕ್ರಮ. ನಮ್ಮ ಕುಟುಂಬದವರು ಇದ್ದರೂ ರಕ್ಷಣೆ ಮಾಡಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ. ರಾಜ್ಯದಲ್ಲಿ ಇತ್ತೀಚೆಗೆ ಅತ್ಯಂತ ಕೆಟ್ಟ ರೀತಿಯ ಬೆಳವಣಿಗೆ ನಡೆದಿದೆ. ಸಮಾಜದಲ್ಲಿ ಉತ್ತಮ ಬದುಕು ಕಾಣಬೇಕು. ಅಂತಹ ಬದುಕಿಗೆ ಯಾವ ರೀತಿ ಧಕ್ಕೆ ಉಂಟಾಗಿದೆ. ಇದು ನೋವಿನ ಸಂಗತಿಯಾಗಿದೆ. ಏ.21 ರಂದು ಪೆನ್‌ಡ್ರೈವ್ ಅನ್ನು ಇಡೀ ರಾಜ್ಯಾದ್ಯಂತ ಬಿಡುಗಡೆ ಮಾಡಿದ್ರು. ಪೊಲೀಸ್ ಅಧಿಕಾರಿಗಳನ್ನ ಇಟ್ಟು ಹಂಚಿದ್ದಾರೆ. ಮಂಡ್ಯ, ಬೆಂಗಳೂರು ಗ್ರಾಮಾಂತರದಲ್ಲಿ ಸೇರಿ ಹಲವು ಕಡೆ ಮಾಡಿದ್ದಾರೆ ಎಂದು ದೂರಿದರು. ಪೂರ್ಣ ಚಂದ್ರ ಅಂತ ಪ್ರಜ್ವಲ್ ಏಜೆಂಟ್ ಇದ್ದರು. ಅವರು ಈ ಸಂಬಂಧ ಏಪ್ರಿಲ್ 22 ರಂದು ಹಾಸನ ಡಿಸಿಗೆ ದೂರು ಕೊಟ್ರು.ಚುನಾವಣೆ ಅಧಿಕಾರಿಗಳೂ ದೂರು ಕೊಟ್ಟಿದ್ದಾರೆ. 21 ರಂದು ರಾತ್ರಿ ಪ್ರಜ್ವಲ್ ವಿಡಿಯೋ ಬಿಡುಗಡೆ ಕ್ಷಣಗಣನೆ ಅಂತ ಲಿಂಕ್ ಕೊಟ್ಟಿದ್ದಾರೆ. ವೀಡಿಯೋದಲ್ಲಿ ಯಾರೇ ಇದ್ದರೂ ರಕ್ಷಣೆ ಕೊಡಲ್ಲ. ನಮ್ಮ ಕುಟುಂಬದವರೇ ಆದರು ರಕ್ಷಣೆ ಮಾಡಲ್ಲ ಎಂದು ಹೆಚ್‌ಡಿಕೆ ಖಡಕ್ ಆಗಿ ತಿಳಿಸಿದ್ದಾರೆ.

### ಕಾನೂನು ಪ್ರಕಾರ ಶಿಕ್ಷೆ ಆಗಲಿ

ನಾಡಿನ ತಾಯಂದಿರ ಮುಂದೆ ಹೇಳ್ತೀನಿ. ಯಾವ ವ್ಯಕ್ತಿಯನ್ನೂ ನಾನು ರಕ್ಷಣೆ ಮಾಡಲ್ಲ. ವೀಡಿಯೋ ಬಿಡುಗಡೆ ಮಾಡ್ತೀನಿ ಅಂತ ನವೀನ್ ಗೌಡ ರಾತ್ರಿ 8ಕ್ಕೆ ಹೇಳಿದ್ದಾನೆ. ಪ್ರಜ್ವಲ್ ಏಜೆಂಟ್ ದೂರು ಕೊಟ್ಟ ಮೇಲೆ ಎಫ್‌ಐಆರ್ ದಾಖಲಾಗಿದೆ. ನವೀನ್, ಕಾರ್ತಿಕ್, ಚೇತನ್, ಪುಟ್ಟರಾಜು ಮೇಲೆ ದೂರು ಕೊಟ್ಟರು. ಎಫ್‌ಐಆರ್ ಹಾಕಿದ್ರೂ ಈ ಕ್ಷಣದವರೆಗೆ ಅವರ ಮೇಲೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 99.84 ₹/L ಡೀಸೆಲ್ : 85.93 ₹/L ಬಂಗಾರ: ₹7,238/Gram(24ct) ₹6,635/Gram(22ct) ಬೆಳ್ಳಿ: ₹85.00/Gram



## ಸಿದ್ಧಸೂಕ್ತಿ


ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಹಿತವಿದಹಿತವಿದೆಂಬ ತಿಳಿವಂತೆ

ನಿಜಗುಣರ ಕೈವಲ್ಯಪದ್ಧತಿಯ ಜ್ಞಾನಪ್ರತಿಪಾದನೂಸ್ಥಲದ ಮಾತು. ನುಡಿಯಂತೆ ನಡೆ, ನಡೆಯಂತೆ ನುಡಿ ನ್ಯಾಯ. ನಡೆ ನುಡಿ ಹೊಂದಿಕೆಯಿಲ್ಲದ ತದ್ವಿರುದ್ಧತೆ ಖಂಡನೀಯ. ಇದು ಹಿತ ಇದು ಅಹಿತ ಎಂಬ ತಿಳಿವಳಿಕೆ ಇದ್ದರೆ ಹಿತವನ್ನು ಅನುಸರಿಸಬೇಕು ಅಹಿತವನ್ನು ಬಿಡಬೇಕು. ಅಹಿತದ ದಾರಿಯಲ್ಲಿದ್ದು ನಾನು ಹಿತಾಹಿತದ ಅರಿವುಳ್ಳವ ಎನ್ನುವುದು, ಅದರ ಸ್ಥಾನಮಾನ ಗಿಟ್ಟಿಸಿಕೊಳ್ಳುವುದು ಡೋಂಗಿ. ಇದು ಪ್ರಾಮಾಣಿಕತೆಗೆ ಎಸಗುವ ಅಪಚಾರ!!

## ಹರಿದಾಸ ವೈಭವ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್.ಕೆ. ವಾದೀಂದ್ರಾಚಾರ್ ಅವರ ನೇತೃತ್ವದಲ್ಲಿ ಮೇ 9, ಗುರುವಾರ ಸಂಜೆ 7-30ಕ್ಕೆ ಹರಿದಾಸ ವೈಭವ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಈ ಕಾರ್ಯಕ್ರಮದಲ್ಲಿ ಶ್ರೀಮತಿ ಐಶ್ವರ್ಯ ಶ್ರೀನಿಧಿ ಕುಲಕರ್ಣಿ ಇವರ ಗಾಯನಕ್ಕೆ ಕು|| ಸೃಷ್ಟಿ ದೇಸಾಯಿ ಹಾರ್ಮೋನಿಯಂ ವಾದನದಲ್ಲಿ ಹಾಗೂ ಚಿ|| ಋತುಪರ್ಣ ದೇಸಾಯಿ ತಬಲಾ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ಅವರು ತಿಳಿಸಿದ್ದಾರೆ.

## ತೀವ್ರಗೊಂಡ ಜೆಡಿಎಸ್ ಕಾರ್ಯಕರ್ತರ ಪ್ರತಿಭಟನೆ; ಟೈಯರ್‌ಗೆ ಬೆಂಕಿ ಹಚ್ಚಿ ಆಕ್ರೋಶ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಬಿಡುಗಡೆ ಪ್ರಕರಣ, ಹೆಚ್.ಡಿ.ರೇವಣ್ಣ ಬಂಧನ ಪ್ರಕರಣಕ್ಕೆ ಸಂಬಂಧಿಸಿದಂತೆ ಜೆಡಿಎಸ್ ಕಾರ್ಯಕರ್ತರು ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ನಡೆಸಿದ್ದಾರೆ. ಪ್ರಜ್ವಲ್ ರೇವಣ್ಣ ವಿರುದ್ಧ ಪೆನ್ ಡ್ರೈವ್ ಬಿಡುಗಡೆ ಹಿಂದೆ ಡಿಸಿಎಂ ಡಿ.ಕೆ.ಶಿವಕುಮಾರ್ ಕೈವಾಡವಿದೆ ಎಂದು ಬಿಜೆಪಿ ಮುಖಂಡ ದೇವರಾಜೇಗೌಡ ಆರೋಪಿಸಿರುವ ಬೆನ್ನಲ್ಲೇ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದಾರೆ.ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಂಡ್ಯ, ಕೋಲಾರ, ಹಾಸನ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಪ್ರತಿಭಟನೆ ತೀವ್ರಗೊಂಡಿದ್ದು, ಟೈರ್ ಗಳಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಎಲ್ .ಆರ್ ಶಿವರಾಮೇ ಗೌಡ ವಿರುದ್ಧ ಘೋಷಣೆ ಕೂಗಿ ಕಿಡಿಕಾರಿದ್ದಾರೆ. ಇದೇ ವೇಳೆ ಸಿಎಂ ಸಿದ್ದರಾಮಯ್ಯ ವಿರುದ್ಧವೂ ಆಕ್ರೋಶ ವ್ಯಕ್ತವಾಗಿದೆ. ಪ್ರತಿಭಟನೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಹಲವು ಜೆಡಿಎಸ್ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

## ಕೊನೆಗೂ ಬಿಟ್ ಕಾಯಿನ್ ಹಗರಣದ ಆರೋಪಿ ಶ್ರೀಕಿ ಅರೆಸ್ಟ್..!

• ಉದಯವಾಹಿನಿ, ಬೆಂಗಳೂರು



ಬಿಟ್ ಕಾಯಿನ್ ಹಗರಣ ಪ್ರಕರಣದ ಆರೋಪಿ ಶ್ರೀಕಿಯನ್ನು ಬಂಧಿಸಲಾಗಿದೆ. 2017ರಲ್ಲಿ ತುಮಕೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಯೂನೋ ಕಾಯಿನ್ ಕಳವು ಪ್ರಕರಣದಲ್ಲಿ ಶ್ರೀಕಿಯನ್ನು ಸಿಐಡಿ ವಿಶೇಷ ತನಿಖಾ ಅಧಿಕಾರಿಗಳು ಬಂಧಿಸಿದ್ದಾರೆ. ಬಿಟ್ ಕಾಯಿನ್ ಹಗರಣ ಪ್ರಕರಣದ ಆರೋಪಿ ಶ್ರೀಕಿ ಅಲಿಯಾಸ್ ಶ್ರೀಕೃಷ್ಣನನ್ನು ಪೊಲೀಸರು ಕೊನೆಗೂ ಬಂಧಿಸಿದ್ದಾರೆ. 2017ರಲ್ಲಿ ತುಮಕೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಯೂನೋ ಕಾಯಿನ್ ಕಳವು ಪ್ರಕರಣದಲ್ಲಿ ಶ್ರೀಕಿಯನ್ನು ವಿಶೇಷ ತನಿಖಾ ಅಧಿಕಾರಿಗಳು ಬಂಧಿಸಿದ್ದಾರೆ ಎಂದು ತಿಳಿದು ಬಂದಿದೆ.

## ರಾಜಾನುಕುಂಟೆಯ ಖಾಸಗಿ ಆಸ್ಪತ್ರೆಯಲ್ಲಿ ಅಗ್ನಿ ಅವಘಡ ತಪ್ಪಿದ ಅನಾಹುತ!

• ಉದಯವಾಹಿನಿ,ಯಲಹಂಕ

ರಾಜಾನುಕುಂಟೆ ಪೊಲೀಸ್ ಠಾಣೆ ವ್ಯಾಪ್ತಿಯ ಖಾಸಗಿ ಆಸ್ಪತ್ರೆಯಲ್ಲಿ ಅಗ್ನಿ ಅವಘಡ ಸಂಭವಿಸಿದ ಘಟನೆ ಜರುಗಿದೆ. ಬೆಂಕಿ ದುರಂತಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ.


ಉದಯವಾಹಿನಿ ಚಿತ್ರ

ರಾಜಾನುಕುಂಟೆಯ ರಕ್ಷಾ ಆಸ್ಪತ್ರೆಯಲ್ಲಿ ದುರಂತ ಸಂಭವಿಸಿದೆ. ಅಗ್ನಿ ಕಾಣಿಸಿಕೊಂಡ ಕೂಡಲೆ ಆಸ್ಪತ್ರೆಯಿಂದ ಜನ ಮತ್ತು ಸಿಬ್ಬಂದಿ ಹೊರಬಂದಿದ್ದಾರೆ. ಒಂಬತ್ತು ಜನ ಅಡ್ಮಿಟ್ ಮೂರು ಜನ ಐ ಸಿ ಯು ನಲ್ಲಿದ್ದರು. ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ಸಿಬ್ಬಂದಿಯಿಂದ ಬೆಂಕಿ ನಂದಿಸುವ ಕಾರ್ಯ ನಡೆದಿದೆ. ಅಗ್ನಿ ದುರಂತದಲ್ಲಿ ಕಟ್ಟಡವನ್ನು ಸಂಪೂರ್ಣ ದಟ್ಟ ಹೊಗೆ ಆವರಿಸಿದೆ. ಸ್ಥಳಕ್ಕೆ ರಾಜಾನುಕುಂಟೆ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಆಗಮಿಸಿದ್ದಾರೆ. ಅದೃಷ್ಟವಶಾತ್ ಯಾವುದೇ ಸಾವು ನೋವು ಸಂಭವಿಸಿಲ್ಲ ಎನ್ನಲಾಗಿದೆ.

## ಸಾವಿರಾರು ಮೀನುಗಳ ಮಾರಣಹೋಮ.. ರಾಚೇನಹಳ್ಳಿ ಕೆರೆಯ ಈ ಸ್ಥಿತಿಗೆ ಕಾರಣವೇನು?

• ಉದಯವಾಹಿನಿ, ಬೆಂಗಳೂರು

ರಾಚೇನಹಳ್ಳಿ ಕೆರೆಯಲ್ಲಿ ಸಾವಿರಾರು ಮೀನುಗಳ ಮಾರಣಹೋಮವಾಗಿದೆ. ಸಾವಿರಾರು ಮೀನುಗಳು ಸತ್ತು ತೇಲುತ್ತಿವೆ. ಸತ್ತ ಮೀನುಗಳ ವಾಸನೆಯಿಂದಾಗಿ ವಾಯುವಿಹಾರಿಗಳು ಬೆಳಗ್ಗೆ-ಸಂಜೆ ವಾಕ್ ಮಾಡಲು ಈ ಕೆರೆಗೆ ಬರುತ್ತಿಲ್ಲ. ರಣಹದ್ದುಗಳು ಮತ್ತು ನಾಯಿಗಳು ಸತ್ತ ಮೀನುಗಳನ್ನು ತಿನ್ನಲು ಬರುತ್ತಿವೆ. ಸತ್ತ ಮೀನುಗಳನ್ನು ಅರ್ಧಂಬರ್ಧ ತಿಂದು ಕೆರೆ ಅಕ್ಕಪಕ್ಕದ ಮನೆಗಳ ಬಳಿ ಬಿಟ್ಟು ಹೋಗುತ್ತಿವೆಯಂತೆ. ಇದರಿಂದ ವಾಸನೆ ತಾಳಲಾಗದೆ ಸಮಸ್ಯೆ ಎದುರಿಸುತ್ತಿದ್ದೇವೆ


ಉದಯವಾಹಿನಿ ಚಿತ್ರ

ಎಂದು ಥಣಿಸಂದ್ರ ನಿವಾಸಿಗಳು ಅಳಲು ತೋಡಿಕೊಂಡಿದ್ದಾರೆ. ರಾಚೇನಹಳ್ಳಿ ಕೆರೆ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದಲ್ಲಿರುವ 148 ಎಕರೆ ವಿಸ್ತೀರ್ಣ ಹೊಂದಿದೆ. ಅಕ್ಕಪಕ್ಕದ ಮನೆಗಳಿಂದ ನೇರವಾಗಿ ನೀರನ್ನು ಬಿಡಲಾಗ್ತಿದೆ. ಇದರಿಂದ ಕೆರೆಯಲ್ಲಿರುವ ಮೀನುಗಳು ಸಾವನ್ನಪ್ಪುತ್ತಿವೆ ಎಂದು ಕೆಲವರು ತಿಳಿಸಿದ್ದಾರೆ. ಕೆರೆಯಲ್ಲಿ ಪರಿಸ್ಥಿತಿ ತುಂಬಾ ಕೆಟ್ಟದಾಗಿದೆ. ಪ್ರತಿನಿತ್ಯ ವಾಕ್ ಮಾಡಲು ಬರ್ತೀನಿ ಆದರೆ ಸತ್ತಿರುವ ಮೀನುಗಳಿಂದ ತುಂಬಾ ಕೆಟ್ಟ ವಾಸನೆ ಬರ್ತಿದೆ. ದಯವಿಟ್ಟು ಬಿಬಿಎಂಪಿ ಅಧಿಕಾರಿಗಳು ಕೆರೆಯನ್ನು ಕ್ಲೀನ್ ಮಾಡಿಸಬೇಕು ಎಂದು ನಿವಾಸಿಗಳು ಮನವಿ ಮಾಡಿದ್ದಾರೆ.

# ಡಿ.ಸಿ ಕಚೇರಿ ಸಮೀಪ ಅಕ್ರಮ ಗಣಿ ಸದ್ದು

## ■ ಅಧಿಕಾರಿಗಳು ಕ್ರಮ ಕೈಗೊಳ್ಳದೆ ಮೌನಕ್ಕೆ ಜಾರಿದ್ದಾರೆ ಸ್ಥಳೀಯರು ದೂರಿದ್ದಾರೆ

• ಉದಯವಾಹಿನಿ, ದೇವನಹಳ್ಳಿ

ತಾಲ್ಲೂಕಿನ ಕುಂದಾಣ ಹೋಬಳಿಯಲ್ಲಿ ಎಗ್ಗಿಲ್ಲದೇ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು, ಕೃಷಿ ಭೂಮಿಯಲ್ಲಿ ಅನಧಿಕೃತವಾಗಿ ಗ್ರಾನೈಟ್ ಫ್ಯಾಕ್ಟರಿಗಳು ದಿನಕ್ಕೊಂದಂತೆ ತಲೆ ಎತ್ತುತ್ತಿವೆ ಎಂಬ ಆರೋಪ ಕೇಳಿ ಬಂದಿವೆ. ಜಿಲ್ಲಾಡಳಿತ ಭವನದಿಂದ 7-8 ಕಿ.ಮೀ ವ್ಯಾಪ್ತಿಯಲ್ಲಿ ಕಲ್ಲು ಗಣಿಯೂ ನಿಯಮ ಬಾಹಿರವಾಗಿ ನಡೆಯತ್ತಿದ್ದರೂ, ರಾಜಕೀಯ ಪ್ರಭಾವದಿಂದ ಜಿಲ್ಲಾಡಳಿತ, ಗಣಿ ಮತ್ತು ಪರಿಸರ ಇಲಾಖೆ ಸೇರಿದಂತೆ ಎಲ್ಲಾ ಅಧಿಕಾರಿಗಳು ಕ್ರಮ ಕೈಗೊಳ್ಳದೆ ಮೌನಕ್ಕೆ ಜಾರಿದ್ದಾರೆ ಎಂದು ಸ್ಥಳೀಯರು ದೂರಿದ್ದಾರೆ.

ಗಣಿಗಾರಿಕೆಯಿಂದ ಈ ಭಾಗದಲ್ಲಿ ರೇಷ್ಮೆ ಬೆಳೆ ಹಾಳಾಗಿದೆ. ಗಣಿ ಧೂಳು ಹಿಪ್ಪು ನೇರಳೆ ಸೊಪ್ಪಿನ ಮೇಲೆ ಕೂರುತ್ತಿರುವುದರಿಂದ ರೇಷ್ಮೆ ಕೃಷಿಗೆ ಪೆಟ್ಟು ಬಿದಿದ್ದೆ ಎಂದು ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯು ಈಗಾಗಲೇ ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಆದರೂ ಇಲ್ಲಿಯವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಈ ವಿಚಾರವೂ ಸದನದಲ್ಲಿಯೂ ಪ್ರತಿಧ್ವನಿಸಿದ್ದು, ಸರ್ಕಾರಗಳು ಬದಲಾದಂತೆ ಅಕ್ರಮ ಗಣಿಗಾರಿಕೆ ವಿಚಾರ ತೆರೆಮರೆಗೆ ಸರಿಯುತ್ತಿದೆ. ಗಣಿದಣಿಗಳ ವಿರುದ್ಧ ಕ್ರಮ ಕೈಗೊಳ್ಳಲು ಆಡಳಿತ ವರ್ಗ ಹಿಂಜರಿಯುತ್ತಿದೆ. ಕೊಯಿರ, ಚಿಕ್ಕಗೊಲ್ಲಹಳ್ಳಿ, ಬ್ಯಾಡರಹಳ್ಳಿ, ಮಾಯಸಂದ್ರ, ಮೀಸಗಾನಹಳ್ಳಿ, ತೈಲಗೆರೆ, ಮುದ್ದನಾಯಕನಹಳ್ಳಿಯ ನಿವಾಸಿಗಳು ಗಣಿ ಧೂಳಿನಿಂದ ನಿತ್ಯ ನರಕ ಅನುಭವಿಸುತ್ತಿದ್ದಾರೆ. ಅಸ್ತಮಾ, ಶ್ವಾಸಕೋಸ ಸಮಸ್ಯೆ ಇರುವ ರೋಗಿಗಳು ಹಾಗೂ ಹಿರಿಯ ನಾಗರಿಕರು ಸಮಸ್ಯೆ ಅನುಭವಿಸುತ್ತಿದ್ದಾರೆ.

ಈ ಹಿಂದೆ ಜಿಲ್ಲಾಧಿಕಾರಿಯಾಗಿದ್ದ ಶ್ರೀನಿವಾಸ್ ಅವರು ರಾತ್ರಿ ವೇಳೆಯಲ್ಲಿ ಗಣಿಗಳಿಂದ ಕಲ್ಲು ದಿಮ್ಮಿ ಸಾಗಟ ಮಾಡದಂತೆ ಆದೇಶ ಮಾಡಿದ್ದರೂ, ಅದ್ಯಾವುದಕ್ಕೂ


ಉದಯವಾಹಿನಿ ಚಿತ್ರ

### ಗ್ರಾನೈಟ್ ಕಾರ್ಖಾನೆ ಆರಂಭ

ಕೃಷಿ ಭೂಮಿಯಲ್ಲಿ ಗ್ರಾನೈಟ್ ಕಾರ್ಖಾನೆ ಗ್ರಾನೈಟ್ ಕಾರ್ಖಾನೆ ಆರಂಭಿಸಬೇಕಾದರೆ ಗಣಿ ಮತ್ತು ಪರಿಸರ ಇಲಾಖೆಯಿಂದ ಅನುಮತಿ ಪಡೆಯಬೇಕು. ಅಲ್ಲದೆ ಕಾರ್ಖಾನೆ ನಡೆಸಲು ಉದ್ದೇಶಿಸಿರುವ ಭೂಮಿಯನ್ನು ವಾಣಿಜ್ಯ ಉದ್ದೇಶಕ್ಕೆ ಎಂಬ ಖರೀದಸಬೇಕು ಅಥವಾ ಭೋಗ್ಯಕ್ಕೆ ಪಡೆಯಬೇಕು.

ಆದರೆ ಇಲ್ಲಿ ಈ ನಿಯಮಗಳನ್ನು ಗಾಳಿ ತೂರಿ ಕೃಷಿಭೂಮಿಯನ್ನು ಖರೀದಿಸಿ ಅಲ್ಲಿ ಅನಧಿಕೃತವಾಗಿ ಗ್ರಾನೈಟ್ ಕಾರ್ಖಾನೆ ನಡೆಸಲಾಗುತ್ತಿದೆ.

**ಕೃಷಿ ಭೂಮಿಯಲ್ಲಿ ವ್ಯಾಪಾರ ವಿರುದ್ಧ ಕ್ರಮ**

ಸೊಪ್ಪು ಹಾಕದ ಉದ್ಯಮಿಗಳು ಅಪಾಯಕಾರಿ ರೀತಿಯಲ್ಲಿ ಲಾರಿಗಳ ಹೊರ ಭಾಗಕ್ಕೆ ಚಾಚುವಂತೆ ಕಲ್ಲು ದಿಮ್ಮಿಗಳನ್ನು ಇಟ್ಟು ರಾತ್ರೋ ರಾತ್ರಿ ಸಾಗಟ ಮಾಡುತ್ತಲೇ ಇದ್ದಾರೆ. ರಸ್ತೆ, ರಾಜಕಾಲುವೆ ಲೆಕ್ಕಿಸದೇ ಅವುಗಳ ಸ್ವರೂಪಕ್ಕೆ ದಕ್ಕೆ ಬರುವ ರೀತಿಯಲ್ಲಿ ಅರ್ಕಾವತಿ ನದಿ ಪಾತ್ರ ಪ್ರದೇಶದಲ್ಲಿ ನಿತ್ಯ ನೂರಾರು ದಿಮ್ಮಿಗಳು ತೋಡಿ ಹೊರ ಹಾಕಲಾಗುತ್ತಿದೆ.

> ಗ್ರಾಮಗಳಲ್ಲಿ ಕಳ್ಳ ಸಾಗಣೆ ಹೆದ್ದಾರಿಯಲ್ಲಿ ಸಂಚರಿಸಿದರೆ ಸಿಕ್ಕಿ ಬೀಳಬೇಕಾಗುತ್ತದೆ ಎಂಬ ಕಾರಣಕ್ಕೆ ಕಲ್ಲು ದಿಮ್ಮಿ ಸಾಗಿಸುವ ಲಾರಿಗಳು ಗ್ರಾಮಗಳ ಸಣ್ಣ ರಸ್ತೆಗಳ ಮೂಲಕ ಕಳ್ಳ ಸಾಗಣೆ ಮಾಡಲಾಗುತ್ತಿದೆ. ಅದು ರಾತ್ರಿ ವೇಳೆ ಕಲ್ಲು ದಿಮ್ಮಿ ಹೊತ್ತ ಲಾರಿಗಳು ನಿರಂತರವಾಗಿ ಸಂಚರಿಸುತ್ತಿವೆ. ಓಡಾಟಕ್ಕೆ ಇರುವ ರಸ್ತೆಗಳು ಗಣಿ ಲಾರಿಗಳ ಸಂಚಾರದಿಂದ ಒಂದೆರೆಡು ವರ್ಷದಲ್ಲಿಯೇ ಹಾಳಾಗುತ್ತಿದೆ. ಇಂತಹ ಲಾರಿಗಳಿಂದ ಹಲವು ಬಾರಿ ಅಪಘಾತಗಳು ಸಂಭವಿಸಿವೆ ಎನ್ನುತ್ತಾರೆ ಸ್ಥಳೀಯರು.

**ಕೋರ್ಟ್ ಆದೇಶಕ್ಕೂ ಕಿಮ್ಮತ್ತಿಲ್ಲ:** ವಿಮಾನ ನಿಲ್ದಾಣದ 25 ಕಿ.ಮೀ ವ್ಯಾಪ್ತಿಯಲ್ಲಿ ಹೆಚ್ಚು ಹಸಿರು ಬೆಳೆಸಿ ಪರಿಸರ ಸಂರಕ್ಷಣೆ ಮಾಡುವಂತೆ ರಾಜ್ಯ ಸರ್ಕಾರಗಳಿಗೆ ವಿವಿಧ ನ್ಯಾಯಾಲಯಗಳು ಆದೇಶ ನೀಡಿದ್ದರೂ ಪ್ರಯೋಜನೆ ಆಗಿಲ್ಲ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಕೇವಲ 10 ಕಿ.ಮೀ ವ್ಯಾಪ್ತಿಯಲ್ಲಿರುವ ಅರ್ಕಾವತಿ ನದಿ ಪಾತ್ರ ಪ್ರದೇಶದಲ್ಲಿ ಇಂದಿಗೂ ಗಣಿಗಾರಿಕೆ ನಡೆಯುತ್ತಿದೆ.

ಕರ್ನಾಟಕ ಗೃಹ ಮಂಡಳಿ, ಪೂರ್ಣ ಪ್ರಜ್ಞಾ ವಿಜ್ಞಾನ ಸಂಶೋಧನಾ ಕೇಂದ್ರದಿಂದ ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಸರ್ಕಾರದ ಎಲ್ಲಾ ಪ್ರಮುಖರು ಪತ್ರ ಬರೆದರೂ ಪ್ರಯೋಜನವಾಗಿಲ್ಲ. ಇದರಿಂದ ಸುತ್ತಮುತ್ತಲಿನ ಕೃಷಿ ಭೂಮಿಗಳಿಗೆ ತೊಂದರೆ ಆಗುತ್ತಿದೆ ಎನ್ನುತ್ತಾರೆ ರೈತರು. ಕೃಷಿ ಭೂಮಿಯಲ್ಲಿ ಗಣಿಗಾರಿಕೆ ನಡೆಸಲು ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ. ಇಲ್ಲಿ ಕೆಲಸ ಮಾಡುವ ಕಾರ್ಮಿಕರ ಯೋಗಕ್ಷೇಮವನ್ನೂ ಕಾರ್ಮಿಕ ಇಲಾಖೆ ನೋಡುತ್ತಿಲ್ಲ. ಇನ್ನೂ ಕೆಲ ಗ್ರಾ.ಪಂ. ಇವರಿಂದ ತೆರಿಗೆ ಸಂಗ್ರಹಿಸುತ್ತಿವೆ. ಕೃಷಿ ಭೂಮಿಯಲ್ಲಿ ವ್ಯಾಪಾರ ಮಾಡುತ್ತಿರುವವ ವಿರುದ್ಧ ಕ್ರಮಕ್ಕೆ ಕಂದಾಯ ಇಲಾಖೆಯೂ ಹಿಂದೆಟ್ಟು ಹಾಕುತ್ತಿದೆ.

## ತಾಯಿ ಕೊಂದ ಮಗನಿಗೆ ಕ್ಲೀನಿಂಗ್ ಶಿಕ್ಷೆ ನೀಡಿದ ಹೈಕೋರ್ಟ್..!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಸ್ವಂತ ತಾಯಿಯನ್ನು ಕೊಂದ ಅಪರಾಧಿ ಮಗನೊಬ್ಬನಿಗೆ ವಿಶಿಷ್ಟ ರೀತಿಯ ಶಿಕ್ಷೆಯನ್ನು ವಿಧಿಸಿದೆ.


ಕುಡಿದ ಮತ್ತಿನಲ್ಲಿ ಮಗ ನೀಡಿದ್ದ ದೊಣ್ಣೆ ಏಟಿಗೆ ಈ ಪ್ರಕರಣದಲ್ಲಿ ತಾಯಿಯಾದವಳು ಸಾವನ್ನಪ್ಪಿದ್ದಳು.

ಗಂಗಮ್ಮ ಅನ್ನೋ ಮಹಿಳೆಯನ್ನು ಆಕೆಯ ಮಗ ಅನಿಲ್ ಕುಡಿದ ಮತ್ತಿನಲ್ಲಿ ಆ ದಿನ ದೊಣ್ಣೆಯಿಂದ ಹಲ್ಲೆ ನಡೆಸಿದ್ದ. ಪ್ರತಿದಿನ ಕುಡಿದು ಬರುತ್ತಿದ್ದ ಮಗ ಕೆಲಸಕ್ಕೆ ಹೋಗದೇ ಇರುವುದನ್ನ ಆಕ್ಷೇಪಿಸಿದ್ದೇ ಗಂಗಮ್ಮಳ ಮೇಲೆ ಆತ ದೊಣ್ಣೆಯಿಂದ ಹೊಡೆದು ಹಲ್ಲೆ ನಡೆಸುವಂತೆ ಮಾಡಿತ್ತು. ಕೂಡಲೇ ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದು, ಪೊಲೀಸರು ಮರಣ ಪೂರ್ವ ಹೇಳಿಕೆಯನ್ನು ಪಡೆದಿದ್ದರು. ಅಷ್ಟಾಗುತ್ತಲೇ ಮಹಿಳೆ ಅಸುನೀಗಿದ್ದರು. ಆದರೆ, ಈ ಪ್ರಕರಣವು ಕೊಡಗು ಜಿಲ್ಲಾ 1ನೇ ಹೆಚ್ಚುವರಿ ಮತ್ತು ಸೆಷನ್ಸ್ ನ್ಯಾಯಾಲಯವು ತಾಯಿಯನ್ನು ಕೊಂದ ಪ್ರಕರಣದಿಂದ ಅನಿಲ್‌ನನ್ನು ಖುಲಾಸೆಗೊಳಿಸಿತ್ತು. ಇದನ್ನ ಮಡಿಕೇರಿ ಗ್ರಾಮೀಣ ಸರ್ಕಲ್ ಇನ್ಸ್‌ಪೆಕ್ಟರ್ ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಿ ಮರು ವಿಚಾರಣೆಗೆ ಮನವಿ ಮಾಡಿದ್ದರು. ಇದೀಗ ಹೈಕೋರ್ಟ್ ವಿಚಾರಣೆ ಬಳಿಕ ತೀರ್ಪು ಪ್ರಕಟಿಸಿದೆ.

ಹೈಕೋರ್ಟ್ ವಿಚಾರಣೆ ನಡೆಸಿ ಐಪಿಸಿ ಸೆಕ್ಷನ್ 304 (2)ರ ಪ್ರಕಾರ ಅನಿಲ್‌ನನ್ನು ದೋಷಿ ಎಂದು ಘೋಷಿಸಿತು. ಆದರೆ, ಅದಾಗಲೇ ಅನಿಲ್ 2 ವರ್ಷಗಳ ಜೈಲು ವಾಸ ಅನುಭವಿಸಿದ್ದರಿಂದ ಹೈಕೋರ್ಟ್ ಆತನನ್ನು ಪುನಃ ಸೆರೆವಾಸಕ್ಕೆ ತಳ್ಳಲು ಇಷ್ಟಪಡಲಿಲ್ಲ. ಅಲ್ಲದೇ, ಆತ ಕುಡಿದ ಮತ್ತಿನಲ್ಲಿ ತಾಯಿಗೆ ಹಲ್ಲೆ ನಡೆಸಿದ್ದು ಆಕೆಯನ್ನು ಕೊಲ್ಲುವ ಉದ್ದೇಶದಿಂದ ಅಲ್ಲ ಎಂದು ಅಭಿಪ್ರಾಯಪಟ್ಟಿದೆ

## ಬೆಂಗಳೂರಲ್ಲಿ ಜೋರು ಮಳೆ: ಎಲ್ಲೆಲ್ಲಿ ಏನಾಗಿದೆ

• ಉದಯವಾಹಿನಿ, ಬೆಂಗಳೂರು




ರಾಜಧಾನಿ ಬೆಂಗಳೂರಿನಲ್ಲಿ ಜಸ್ಟ್ ಅರ್ಧಗಂಟೆ ಸುರಿದ ಮಳೆ ಬೆಂಗಳೂರನ್ನೇ ಅಲ್ಲಾಡಿಸಿದೆ. ಒಂದು ಕಡೆ ಅಂಡರ್‌ಪಾಸ್‌ಗಳು ಜಲಾವೃತಗೊಂಡರೆ, ಮತ್ತೊಂದೆಡೆ 25ಕ್ಕೂ ಹೆಚ್ಚು ಮರಗಳು ಧರೆಗೆ ಉರುಳಿವೆ. ವಾನಹ ಸವಾರರು ಪರದಾಡಿದ್ದು, ಜನಜೀವನ ಸಂಪೂರ್ಣ ಅಸ್ತವ್ಯಸ್ತವಾಗಿದೆ.

ಅರ್ಧಗಂಟೆ ಬಂದ ಮಳೆಗೆ ನಗರದಲ್ಲಿ 25ಕ್ಕೂ ಹೆಚ್ಚು ಭಾಗದಲ್ಲಿ ಮರಗಳು ಧರೆಗೆ ಉರುಳಿವೆ. ನಗರದ ಜಯನಗರ, ಬಸವನಗುಡಿ, ಮಲ್ಲೇಶ್ವರಂ, ಕೋರಮಂಗಲ, ಬಿಟಿಎಂ ಲೇಔಟ್, ಯಶವಂತರಪುರ ಸೇರದಿಂತೆ ಹಲವೆಡೆ ಮರಗಳು ಧರೆಗೆ ಉರುಳಿವೆ. ದೂರು ಬಂದ ನಗರಗಳಲ್ಲಿ ಮರಗಳನ್ನು ಬಿಬಿಎಂಪಿ ಸಿಬ್ಬಂದಿಗಳು ತೆರವುಗೊಳಿಸಿದ್ದಾರೆ ಬಿಬಿಎಂಪಿ ಕಂಟ್ರೋಲ್ ರೂಮ್ ಇಂದ ಮಾಹಿತಿ ನೀಡಲಾಗಿದೆ ಆನೇಕಲ್ ಭಾಗದಲ್ಲೂ ಬಿರುಗಾಳಿ ಆಲಿಕಲ್ಲು ಸಹಿತ ಮಳೆ ಆಗಿದೆ. ಸೂರ್ಯಸಿಟಿಯಲ್ಲಿ ಆಸ್ಪತ್ರೆಯ ಶೀಟ್‌ಗಳೇ ಹಾರಿ ಹೋಗಿವೆ. ಪಾರ್ಕಿಂಗ್‌ನಲ್ಲಿದ್ದ ಕಾರುಗಳು ಜಖಂಗೊಂಡಿವೆ. ಆನೇಕಲ್ ತಾಲ್ಲೂಕಿನ ಬನಹಳ್ಳಿಯಲ್ಲಿ 10ಕ್ಕೂ ಹೆಚ್ಚು ಮನೆಗಳ ಶೀಟ್‌ಗಳು ಹಾರಿ ಹೋಗಿದ್ದು, ಸಿಮೆಂಟ್ ಬ್ರಿಕ್ಸ್‌ಗಳು ಕೂಡಾ ನೆಲಕ್ಕುರುಳಿವೆ. ಮೂವರು ಸಣ್ಣಪುಟ್ಟ ಗಾಯಗಳೊಂದಿಗೆ ಬಚಾವ್ ಆಗಿದ್ದಾರೆ. ಇನ್ನು ಹೆಣ್ಣೂರು ಮುಖ್ಯರಸ್ತೆಯ ಲಿಂಗರಾಜ ಪುರಂ ಬಳಿ ಚಲಿಸುತ್ತಿದ್ದ ಕಾರ್ ಮೇಲೆ ಮರ ಉರುಳಿಬಿದ್ದಿತ್ತು. ಅದೃಷ್ಟವಶಾತ್ ಕಾರ್‌ನಲ್ಲಿದ್ದವರು ಬಚಾವ್ ಆಗಿದ್ದಾರೆ. ಪಾಲಿಕೆ ಸಿಬ್ಬಂದಿ ಹಾಗೂ ಟ್ರಾಫಿಕ್ ಪೊಲೀಸರು ಮರತೆರವುಗೊಳಿಸೋ ಕೆಲಸ ಮಾಡಿದರು.

## ಬೆಂಗಳೂರಿನ ವಿವಿಧ ಕಡೆ ರಾತ್ರೋ ರಾತ್ರಿ ಡಿಸಿಎಂ ಪೋಸ್ಟರ್!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಪ್ರಜ್ವಲ್ ವಿರುದ್ಧದ ಪೆನ್ ಡ್ರೈವ್ ಪ್ರಕರಣದಲ್ಲಿ ಡಿಕೆಶಿ ಕೈವಾಡ ಇದೆ ಎಂಬ ವಕೀಲ ದೇವರಾಜೇಗೌಡ ಹೇಳಿಕೆ ಬೆನ್ನಲ್ಲೇ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಬೆಂಗಳೂರಿನ ವಿವಿಧ ಕಡೆ ರಾತ್ರೋ ರಾತ್ರಿ ಡಿಕೆ ಶಿವಕುಮಾರ್ ವಿರುದ್ಧದ ಪೋಸ್ಟರ್‌ಗಳು ಕಂಡು ಬಂದಿದೆ. ಪೆನ್ ಡ್ರೈವ್ ಪ್ರಕರಣದಲ್ಲಿ ಡಿಕೆಶಿ ಪಾತ್ರ ಇದೆ ಎಂಬ ದೇವರಾಜಗೌಡ ಹೇಳಿಕೆ ಹಿನ್ನಲೆ ಉಪ ಮುಖ್ಯಮಂತ್ರಿ ಡಿಕೆಶಿ ವಿರುದ್ಧ ಪೋಸ್ಟರ್ ವಾರ್ ಶುರುವಾಗಿದೆ. ಲುಲು ಮಾಲ್, ಕೆಪಿಸಿಸಿ ಕಛೇರಿ ಸೇರಿದಂತೆ ಬೆಂಗಳೂರಿನ ವಿವಿಧ ಕಡೆಗಳಲ್ಲಿ ಪೋಸ್ಟರ್ ಅಂಟಿಸಲಾಗಿದೆ.

**ಡಿಕೆಶಿ ವಿರುದ್ಧ ಪೋಸ್ಟರ್ ವಾರ್ ಶುರು**

ಇನ್ನೂ ಪ್ರಕರಣದ ರೂವಾರಿ ಬೇರೆ ಯಾರೂ ಅಲ್ಲ ಒನ್ ಆಂಡ್ ಓನ್ಲಿ ಡಿಸಿಎಂ ಡಿಕೆಶಿ ಎಂದಿರುವ ವಕೀಲ ದೇವರಾಜೇಗೌಡ, ಡಿಕೆ ಶಿವಕುಮಾರ್ ಆಫರ್ ಕೊಟ್ಟರು ಎನ್ನಲಾದ ಆಡಿಯೋ ಬಿಡುಗಡೆ ಮಾಡಿದ್ದಾರೆ. ಆದರೆ ದೇವರಾಜೇಗೌಡ ಅರ್ಧಂಬರ್ಧ ಆಡಿಯೋ ಪ್ಲೇ ಮಾಡಿದ್ದು, ಫುಲ್ ಆಡಿಯೋ ಪ್ಲೇ ಮಾಡಲು ಆಗಲ್ಲ ಎಂದು ದೇವರಾಜೇಗೌಡ ತಿಳಿಸಿದ್ದಾರೆ.

ಪ್ಲೇ ಮಾಡಿದ ಆಡಿಯೋದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಹೇಳಿ, ಏನು ವಿಚಾರ ಎನ್ನುವ ಮಾತಷ್ಟನ್ನೇ ಕೇಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಎಸ್‌ಐಟಿ ಅಧಿಕಾರಿ ಸುಮನ್ ಪೆನ್ನೇಕಾರ್ ಫೋಟೋ ತೋರಿಸಿದ ವಕೀಲ ದೇವರಾಜೇಗೌಡ, ಇವರು ನನ್ನ ಹೇಳಿಕೆಯಲ್ಲಿರುವ ಡಿಕೆಶಿ ಅವರ ಹೆಸರನ್ನು ತೆಗೆಯಲು ಹೇಳಿದ್ದರು ಎಂದು ಆರೋಪಿಸಿದ್ದಾರೆ.

## ವಿಚ್ಛೇದನ ಪಡೆಯಲು ಆರೋಪ ಸಾಬೀತುಪಡಿಸುವ ಅಗತ್ಯ

• ಉದಯವಾಹಿನಿ, ಬೆಂಗಳೂರು

ವಿಚ್ಛೇದನ ಪಡೆಯಲು ಎಲ್ಲಾ ಆರೋಪಗಳನ್ನು ಸಾಬೀತು ಪಡಿಸುವ ಅಗತ್ಯವಿಲ್ಲ, ಕರ್ನಾಟಕ ಹೈಕೋರ್ಟ್ ಹೇಳಿದೆ. ತುಮಕೂರಿನ ನಿವಾಸಿಗಳ ನಡುವಿನ ವಿವಾಹವನ್ನು ಹೈಕೋರ್ಟ್ ಅನೂರ್ಜಿತಗೊಳಿಸಿ ವಿಚ್ಛೇದನ ನೀಡಿ ಈ ಮಹತ್ವದ ತೀರ್ಪು ನೀಡಿದೆ. ಕೆಲವು ಆರೋಪ ಸಾಬೀತಾಗಿ ಉಳಿದ ಆರೋಪಗಳನ್ನೂ ಸಾಬೀತುಪಡಿಸುವ ಅಗತ್ಯವಿಲ್ಲ ಎಂದಿದೆ.

ಮಾನಸಿಕ ಕ್ರೌರ್ಯ ಮತ್ತು ಪತಿ ದೂರ ಮಾಡಿದ ಕಾರಣದಿಂದ ಮಹಿಳೆ ವಿಚ್ಛೇದನ ಕೋರಿದಾಗ ಇಂತಹ ಪ್ರಕರಣ ಬಯಲಾಗಿದೆ. ಪತಿ ತನ್ನ ಚಾರಿತ್ರ್ಯದ ಮೇಲೆ ಅನುಮಾನ ವ್ಯಕ್ತಪಡಿಸಿದ್ದು, ಇದರಿಂದ ಮಾನಸಿಕ ಯಾತನೆ ಉಂಟಾಗಿದೆ ಎಂದು ಪತ್ನಿ ಹೇಳಿಕೊಂಡಿದ್ದಾರೆ. ಅಲ್ಲದೇ ತಮ್ಮ ವೈವಾಹಿಕ ಸಂಬಂಧವನ್ನು ಮರುಸ್ಥಾಪಿಸಲು ಪತಿ ನಿರಾಕರಿಸಿದ್ದರಿಂದ ಅವರಿಂದ ವಿಚ್ಛೇದನ ಪಡೆಯಲು ಪತ್ನಿ ನಿರ್ಧರಿಸಿದ್ದರು. ಇದರಲ್ಲಿ ಕೆಲ ಸತ್ಯಾಂಶ ಕಂಡುಕೊಂಡ ಕೋರ್ಟ್ ಈ ತೀರ್ಪು ನೀಡಿದೆ.ಆದರೆ, ಪತ್ನಿ ಸಹೋದ್ಯೋಗಿಯೊಂದಿಗೆ ವಿವಾಹೇತರ ಸಂಬಂಧದಲ್ಲಿ ತೊಡಗಿರುವುದಾಗಿ ಆರೋಪಿಸಿದಾಗ ಕಾನೂನು ಹೋರಾಟಕ್ಕೆ ತಿರುವು ಸಿಕ್ಕಿತು. ಈ ಬಹಿರಂಗಪಡಿಸುವಿಕೆಯ ಹೊರತಾಗಿಯೂ, ಮಹಿಳೆ ತನ್ನ ಸಹೋದ್ಯೋಗಿಯನ್ನು ಮದುವೆಯಾಗಲು ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿರುವುದಾಗಿ ಪತಿಯ ಆರೋಪಗಳನ್ನು ಆಧಾರರಹಿತ, ಮಾನನಷ್ಟದ ರೂಪದಲ್ಲಿ ಹೈಕೋರ್ಟ್ ಪರಿಗಣಿಸಿದೆ.

> ಮಾನಸಿಕ ಕ್ರೌರ್ಯವನ್ನು ರೂಪಿಸುತ್ತದೆ ಅಲ್ಲದೇ ಪತ್ನಿಯ ಸಂಬಂಧದಿಂದಾಗಿ ಪತಿಯ ನಡವಳಿಕೆಯನ್ನು ನ್ಯಾಯಾಲಯವು ಸ್ವಲ್ಪ ಮಟ್ಟಿಗೆ ಒಪ್ಪಿದೆ. ಪತಿಯ ವರ್ತನೆಯಿಂದ ಆತನೊಂದಿಗೆ ಬದುಕುವುದು ಪತ್ನಿಗೆ ಸವಾಲಾಗಿದ್ದು ಆದರೂ ಇದನ್ನು ಸಾಬೀತು ಪಡಿಸಲು ಸಾಕಷ್ಟು ಪುರಾವೆಗಳಿಲ್ಲ ಎಂದು ಕೋರ್ಟ್ ತೀರ್ಪು ನೀಡಿದೆ.

## 108 ಸಿಬ್ಬಂದಿಗಳಿಗೆ ಹೆಚ್ಚುವರಿ ವೇತನ ನೀಡಲು ಸಾಧ್ಯವಿಲ್ಲ

• ಉದಯವಾಹಿನಿ, ಬೆಂಗಳೂರು

108 ಸಿಬ್ಬಂದಿಗಳಿಗೆ ಹೆಚ್ಚುವರಿ ವೇತನ ನೀಡಲು ಸಾಧ್ಯವಿಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ ನೀಡಿದ್ದಾರೆ. 108 ಸಿಬ್ಬಂದಿ ಮುಷ್ಕರದ ವಿಚಾರವಾಗಿ ಟ್ವೀಟ್ ಮಾಡಿರುವ ಸಚಿವರು, ಸಿಬ್ಬಂದಿಗೆ ಕನಿಷ್ಠ ವೇತನದನ್ವಯ 35 ಸಾವಿರಕ್ಕೂ ಹೆಚ್ಚು ವೇತನ ಸಿಗುತ್ತಿದೆ. ಆದರೆ ಕನಿಷ್ಟ ವೇತನದ ಮೇಲೆ 45% ಹೆಚ್ಚುವರಿ ವೇತನ ಅನುಷ್ಠಾನಕ್ಕೆ ಸಿಬ್ಬಂದಿ ಬೇಡಿಕೆ ಇಟ್ಟಿದ್ದು. ನೀತಿ ಸಂಹಿತೆ ಹಿನ್ನೆಲೆ ನಿಯಮಬಾಹಿರವಾಗಿ ಬೇಡಿಕೆ ಪೂರೈಸಲು ಸಾಧ್ಯವಿಲ್ಲ. ಈ ಬಗ್ಗೆ 108 ಸಿಬ್ಬಂದಿಗಳಿಗೆ ಮನವರಿಕೆ ಮಾಡಿಕೊಡಲಾಗಿದ್ದು, ಮುಷ್ಕರ ನಡೆಸದಂತೆ ಮನವಿ ಮಾಡಲಾಗಿದೆ. ಇದಕ್ಕೂ ಮೀರಿ ಸಿಬ್ಬಂದಿಗಳು ಮುಷ್ಕರಕ್ಕೆ ಮುಂದಾದರೆ ಪರ್ಯಾಯ ವ್ಯವಸ್ಥೆಗೆ ಸರ್ಕಾರ ಸಿದ್ಧವಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಟ್ವೀಟ್ ಮಾಡಿದ್ದಾರೆ.

## ಪೆನ್ ಡ್ರೈವ್ ಸೂತ್ರಧಾರಿ ಕಾರ್ತಿಕ್ ಗೌಡ ಎಲ್ಲಿದ್ದಾನೆ?

• ಉದಯವಾಹಿನಿ, ಬೆಂಗಳೂರು


ಸಂಸದ ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಪೆನ್ ಡ್ರೈವ್ ಹಂಚಿಕೆ ಕೇವಲ ಹಾಸನ ಜಿಲ್ಲೆಗೆ ಮಾತ್ರ ಹಂಚಿಕೆಯಾಗಿಲ್ಲ, ಬೆಂಗಳೂರು ಗ್ರಾಮಾಂತರಕ್ಕೂ ಹಂಚಿಕೆಯಾಗಿದೆ. 25 ಸಾವಿರ ಪೆನ್ ಡ್ರೈವ್ ಹಂಚಿದ್ದಾರೆ ಎಂದು ಕಿಡಿಕಾರಿದ್ದಾರೆ.

ಬೆಂಗಳೂರಿನ ಜೆಪಿ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಸಿಎಂ ಕುಮಾರಸ್ವಾಮಿ, ಪೆನ್ ಡ್ರೈವ್ ಹಂಚಿಕೆಯಲ್ಲಿ ಪೊಲೀಸ್ ಅಧಿಕಾರಿಗಳೇ ಸಹಕಾರ ನೀಡಿದ್ದಾರೆ. ಪ್ರಜ್ವಲ್ ರೇವಣ್ಣ ಅಶ್ಲೀಲ ವಿಡಿಯೋ ಪ್ರಕರಣದ ತನಿಖೆ ರಚನೆಯಾಗಿರುವ ಎಸ್‌ಐಟಿ ವಿಶೇಷ ತನಿಖಾ ದಳವಲ್ಲ ಇದು ಒಂದು ಸಿದ್ದರಾಮಯ್ಯ ಇನ್ವೆಸ್ಟಿಗೇಷನ್ ಟೀಮ್, ಮತ್ತೊಂದು ಡಿ.ಕೆ.ಶಿವಕುಮಾರ್ ಇನ್ವೆಸ್ಟಿಗೇಷನ್ ಟೀಮ್ ಎಂದು ಆಕ್ರೋಶ ವ್ಯಕ್ತಪಡಿಸಿದರು. ಏಪ್ರಿಲ್ 21ರಂದು ಪೆನ್ ಡ್ರೈವ್ ಹಂಚಿಕೆಯಾಗಿದೆ. ನವೀನ್ ಗೌಡ ಎಂಬಾತ ಸಾಮಾಜಿಕ ಜಾಲತಾಣಗಳಲ್ಲಿ ಸ್ಟೇಟಸ್ ಹಾಕಿದ್ದ.

ವಿಡಿಯೋ ಬಿಡುಗಡೆಗೆ ಕ್ಷಣಗಣನೆ ಎಂದು. ನವೀನ್ ಗೌಡ, ಶ್ರೇಯಸ್, ಪುಟ್ಟಿ ಅಲಿಯಾಸ್ ಪುಟ್ಟಗೌಡ ಸೇರಿದಂತೆ ಐವರ ವಿರುದ್ಧ ದೂರು ನೀಡಿದರೂ ಯಾವುದೇ ಕ್ರಮಗಳನು ಕೈಗೊಳ್ಳಲಿಲ್ಲ. 25 ಸಾವಿರ ಪೆನ್ ಡ್ರೈವ್ ಹಂಚಿಕೆ ಮಾಡಿದ್ದಾರೆ. ಈ ಪ್ರಕರಣದಿಂದ ನನಗೆ ತುಬಾ ನೋವಾಗಿದೆ. ಇದರಲ್ಲಿ ನಾನು ಯಾರನ್ನೂ ರಕ್ಷಿಸುತ್ತಿಲ್ಲ. ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ರೂ ಅವರಿಗೆ ಕಠಿಣ ಶಿಕ್ಷೆ ಯಾಗಲಿ ಎಂದು ಹೇಳಿದರು. ಪೆನ್ ಡ್ರೈವ್ ಸೂತ್ರಧಾರ ಕಾರ್ತಿಕ್ ಗೌಡ. ಕಾರ್ತಿಕ್ ಗೌಡನನ್ನು ಯಾಕೆ ಈವರೆಗೆ ಬಂಧಿಸಿಲ್ಲ. ಆತ ಯಾಕೆ ಎಲ್ಲಿಯೂ ಹೊರ ಬರುತ್ತಿಲ್ಲ. ಕೇವಲ ವಿಡಿಯೋ ಹೇಳಿಕೆಗಳನ್ನು ಮಾತ್ರ ನೀಡುತ್ತಿದ್ದಾನೆ ಕಾರ್ತಿಕ್ ಗೌಡನನ್ನು ಯಾಕೆ ರಕ್ಷಣೆ ಮಾಡುತ್ತಿದ್ದೀರಿ? ಎಂದು ಪ್ರಶ್ನಿಸಿದ್ದಾರೆ.

> ಸಂತ್ರಸ್ತೆ ಕಿಡ್ನ್ಯಾಪ್ ಆಗಿರುವ ಪ್ರಕರಣ ಬೆಳಕಿಗೆ ಬಂದಾಗ ಮಹಿಳೆ ಬದುಕಿದ್ದಾಳೋ ಸತ್ತಿದ್ದಾಳೋ ಗೊತ್ತಿಲ್ಲ ಎಂದು ಅಂದು ಹೇಳಿಕೆ ಕೊಟ್ಟವರು ಬಳಿಕ ಆಕೆಯಕ್ನು ಎಲ್ಲಿಂದ ಹುಡುಕಿ ತಂದಿರಿ ಯಾವುದೇ ಒಂದು ಪ್ರಕರಣದ ತನಿಖೆ ಆರಂಭವಾದಾಗ ಮಾಹಿತಿ ಸೋರಿಕೆ ಆಗಬಾರದು. ಆದರೆ ಇಲ್ಲಿ ಆಗುತ್ತಿರುವುದೇನು ಸರ್ಕಾರಕ್ಕೆ ಸಂತ್ರಸ್ತೆಯ ರಕ್ಷಣೆ ಬೇಕಾಗಿಲ್ಲ. ಈ ಸರ್ಕಾರಕ್ಕೆ ಬೇಕಾಗಿರುವುದು ಕೇವಲ ಪ್ರಚಾರ. ಪ್ರಕರಣದ ಬಗ್ಗೆ ಸರಿಯಾದ ರೀತಿಯಲ್ಲಿ, ಪ್ರಾಮಾಣಿಕವಾಗಿ ತನಿಖೆಯಾದರೆ ಎಲ್ಲಾ ಸತ್ಯವೂ ಹೊರಬರುತ್ತದೆ ಎಂದು ಹೇಳಿದರು.

**ಮಾಜಿ ಸಿಎಂ ಹೆಚ್‌ಡಿಕೆ ಪ್ರಶ್ನೆ**



# ನೀಡಿರುವ ಬರ ಪರಿಹಾರ ಗ್ಯಾರಂಟಿ ಸ್ಕೀಂಗಳಿಗೆ ಬಳಸಬಾರದು

## ■ ಜನರ ಜೊತೆಗೂಡಿ ಹೋರಾಟವನ್ನು ಹಮ್ಮಿಕೊಳ್ಳಲಿದೆ: ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಲೀಸ್‌ಗೆ ಕೊಡುವ ಮೂಲಕ ಪರೋಕ್ಷ ಮಾರಾಟಕ್ಕೆ ದಿವಾಳಿಯತ್ತ ಮುನ್ನಡೆಯುತ್ತಿರುವ ರಾಜ್ಯದ ಕಾಂಗ್ರೆಸ್ ಸರಕಾರ ಮುಂದಾಗಿದೆ. ಇದರ ವಿರುದ್ಧ ಬಿಜೆಪಿಯು ಜನರ ಜೊತೆಗೂಡಿ ಹೋರಾಟವನ್ನು ಹಮ್ಮಿಕೊಳ್ಳಲಿದೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಎಚ್ಚರಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಚ್‌ಎಸ್‌ಆರ್ ಲೇಔಟ್, ಆಸ್ಟಿನ್ ಟೌನ್, ಕೋರಮಂಗಲ, ವಿಜಯನಗರ, ಆರ್.ಟಿ.ನಗರ, ಸದಾಶಿವನಗರದ ಬಿಡಿಎ ಸ್ವತ್ತುಗಳನ್ನು ನುಂಗಣ್ಣಗಳು ನುಂಗಲು ಹೊರಟಿದ್ದಾರೆ. 2013-18ರಲ್ಲಿ ಇದೇ ಮಾದರಿಯ ಯೋಜನೆ ಜಾರಿಗೊಳಿಸಲು ಕಾಂಗ್ರೆಸ್ ಸರಕಾರ ಮುಂದಾಗಿತ್ತು. ಇದರ ವಿರುದ್ಧ ಬೆಂಗಳೂರಿನ ಜನರು ಪ್ರತಿಭಟನೆ ಮಾಡಿದ್ದರು ಎಂದು ನೆನಪಿಸಿದರು. ಆಗ ಅದು ನಿಂತು ಹೋಗಿತ್ತು. ಮಡಿವಾಳದ ಆಸ್ತಿ ಕಾಂಗ್ರೆಸ್‌ನಾಯಕರ ಪಾಲಾದಂತೆ ಇದು ಕೂಡ ಆಗಬಾರದೆಂದು ಜನರು ಹೋರಾಟ ಆರಂಭಿಸಿದ್ದಾರೆ. 3 ಸಾವಿರ ಕೋಟಿ ಬೆಲೆಬಾಳುವ ಆಸ್ತಿ ಇದು. ಇದರ ಹಿಂದೆ 200 ಕೋಟಿಗೂ ಮೇಲ್ಪಟ್ಟು ಕಿಕ್ ಬ್ಯಾಕ್ ಇದೆ ಎಂದು ಆರೋಪಿಸಿದರು. ಇದೇನೂ ಕಾಂಗ್ರೆಸ್ಸಿಗರ ಅಪ್ಪನ ಆಸ್ತಿ ಅಲ್ಲ. ಬಿಡಿಎ ಹಿಂದಿನ ಅಧ್ಯಕ್ಷರು ಆಸ್ತಿಗಳನ್ನು ಉಳಿಸಿ ಬೆಳೆಸಿದ್ದಾರೆ. 'ದಿನವೂ ಕೋಳಿ ಮೊಟ್ಟೆ ತಿನ್ನೋದ್ಯಾಕೆ ಕೋಳಿಯನ್ನೇ ತಿಂದರೆ ಹೇಗೆ' ಎಂದು ಇವರು ಹೊರಟಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಇದನ್ನು ಕಾಂಗ್ರೆಸ್ ನುಂಗಣ್ಣಗಳ ಪಾಲಾಗಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

> ಜನರು ಇಂದು ನಡೆಯುವ ರಾಜ್ಯದ ಎರಡನೇ ಹಂತದ ಮತದಾನದಲ್ಲಿ ಗರಿಷ್ಠ ಪ್ರಮಾಣದಲ್ಲಿ ಮತದಾನ ಮಾಡಬೇಕು. ಈ ಮೂಲಕ ಸುಭದ್ರ ಸರಕಾರ ರಚನೆಗೆ ಅವಕಾಶ ಮಾಡಿಕೊಡಬೇಕು ಎಂದು ಅವರು ವಿನಂತಿಸಿದರು.

**ರಾಜ್ಯದ 2ನೇ ಹಂತದ ಮತದಾನ**

ಎಚ್‌ಎಸ್‌ಆರ್‌ನಲ್ಲಿ ಸತೀಶ್ ರೆಡ್ಡಿಯವರ ನೇತೃತ್ವದಲ್ಲಿ ಪ್ರತಿಭಟನೆಗೆ ಜನರು ಮುಂದಾಗಿದ್ದಾರೆ. ಸರಕಾರವು ಪಾಪರ್ ಆಗಿದ್ದರೆ ಬೇರೆ ಆದಾಯ ಮೂಲಗಳನ್ನು ಹುಡುಕಬೇಕು. ಸರಕಾರಿ ಆಸ್ತಿ ನುಂಗಿ ನೀರು ಕುಡಿಯಲು ಯಾವುದೇ ಕಾರಣಕ್ಕೂ ಅವಕಾಶ ಕೊಡುವುದಿಲ್ಲ ಎಂದು ತಿಳಿಸಿದರು.

> ಹಿಂದೆ ಯಡಿಯೂರಪ್ಪ ಅವರು ಮುಖ್ಯಮಂತ್ರಿ ಇದ್ದಾಗ ಈ ಕಡತ ಬಂದಿತ್ತು. ನಾನು ಸಚಿವನಾಗಿದ್ದೆ. ಇದು ಲೂಟಿ ಹೊಡೆಯುವ ಸ್ಕೀಂ ಎಂದು ತಿಳಿಸಿ ರದ್ದು ಮಾಡಿಸಿದ್ದೆ. ಮತ್ತೆ ಈ ಮಾಫಿಯಾವು ಬಸವರಾಜ ಬೊಮ್ಮಾಯಿಯವರ ಮುಂದೆ ಈ ಕಡತವನ್ನು ತಂದಿತ್ತು. ಆದರೆ, ಬೊಮ್ಮಾಯಿಯವರು ಲೀಸ್‌ಗೆ ಅವಕಾಶ ಕೊಡಲಿಲ್ಲ. ಈಗ ಮತ್ತೆ ಬಿಡಿಎ ಕಾಂಗ್ರೆಸ್‌ಅಧಿಕಾರದಲ್ಲಿ ಹರಾಜಿಗೆ ಬರುತ್ತಿದೆ ಎಂದು ಅವರು ತಿಳಿಸಿದರು.

> ಕೇಂದ್ರದಲ್ಲಿರುವ ರಾಹುಲ್ ಗಾಂಧಿ, ಸೋನಿಯಾ ಗಾಂಧಿಯವರಿಗೆ ಕಪ್ಪ ಕೊಡಲು ಈ ಹಣವನ್ನು ಲೂಟಿ ಮಾಡಲು ಹೊರಟಿದ್ದಾರೆ ಎಂದು ಅವರು ಆರೋಪಿಸಿದರು. ಸರಕಾರಿ ಆಸ್ತಿ ಉಳಿಸಿಕೊಳ್ಳಲು ಬೆಂಗಳೂರಿನ ಜನರು ಬೆಂಬಲವಾಗಿ ನಿಲ್ಲಬೇಕಿದೆ ಎಂದು ತಿಳಿಸಿದರು.

ಕೇಂದ್ರ ಸರಕಾರ ಬಿಡುಗಡೆ ಮಾಡಿದ ಬರ ಪರಿಹಾರ ಮೊತ್ತಕ್ಕೆ ಮ್ಯಾಚಿಂಗ್ ಗ್ರಾಂಟ್ ಸೇರಿಸಿ ರೈತರಿಗೆ ನೀಡಬೇಕು. ಇದನ್ನು ಯಾವುದೇ ಕಾರಣಕ್ಕೂ ಗ್ಯಾರಂಟಿ ಸ್ಕೀಂಗಳಿಗೆ ಬಳಸಬಾರದು ಎಂದು ಅವರು ಆಗ್ರಹಿಸಿದರು.

ಟೆಂಡರ್ ಪ್ರಸ್ತಾಪವನ್ನು ರದ್ದು ಮಾಡಬೇಕು. ಇಲ್ಲವಾದರೆ ವಿಧಾನಸಭೆ ಒಳಗೆ ಮತ್ತು ಹೊರಗಡೆ ಹೋರಾಟ ನಡೆಸುತ್ತೇವೆ ಎಂದು ಆರ್. ಅಶೋಕ್ ಅವರು ತಿಳಿಸಿದರು. ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಶ್ರೀಮತಿ ಮಾಳವಿಕ ಅವಿನಾಶ್, ರಾಜ್ಯ ಮುಖ್ಯ ವಕ್ತಾರ ಅಶ್ವತ್ಥನಾರಾಯಣ್ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಬಲಿಷ್ಠ ರಾಜಸ್ಥಾನ್ ವಿರುದ್ಧ ಡೆಲ್ಲಿಗೆ ಭರ್ಜರಿ ಗೆಲುವು

## ರಾಜಸ್ಥಾನ್ ರಾಯಲ್ಸ್ ತಂಡವು 8 ವಿಕೆಟ್ ನಷ್ಟಕ್ಕೆ 201 ರನ್ ಗಳಿಸುವ ಮೂಲಕ 20 ರನ್ ಗಳಿಂದ ಸೋಲು

ರಾಜಸ್ಥಾನ್ ರಾಯಲ್ಸ್ ತಂಡವು ನಿಗದಿತ 20 ಓವರ್‌ಗೆ 8 ವಿಕೆಟ್ ನಷ್ಟಕ್ಕೆ 201 ರನ್ ಗಳಿಸುವ ಮೂಲಕ 20 ರನ್‌ಗಳಿಂದ ಸೋಲನ್ನಪ್ಪಿದೆ. ರಾಜಸ್ಥಾನ್ ರಾಯಲ್ಸ್ ಸೋಲುವ ಮೂಲಕ ಮತ್ತೊಮ್ಮೆ ಪ್ಲೇಆಫ್‌ಗಾಗಿ ಕಾಯಬೇಕಿದೆ. ಆದೇ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಪ್ಲೇಆಫ್ ಆಸೆ ಇನ್ನೂ ಜೀವಂತವಾಗಿದೆ.

### ಸಂಜು ಸ್ಯಾಮ್ಸನ್ ಆಟ ವ್ಯರ್ಥ

ಇನ್ನು, ಡೆಲ್ಲಿ ಕ್ಯಾಪಿಟಲ್ಸ್ ತಂಡ ನೀಡಿದ 222 ರನ್ ಗಳ ಬೃಹತ್ ಟಾರ್ಗೆಟ್ ಬೆನ್ನಟ್ಟಿದ ರಾಜಸ್ಥಾನ್ ತಂಡಕ್ಕೆ ಆರಂಭದಲ್ಲಿಯೇ ಆಘಾತ ಉಂಟಾಯಿತು. ಆರಂಭಿಕರಾಗಿ ಕಣಕ್ಕಿಳಿದ ಯಶಸ್ವಿ ಜೈಸ್ವಾಲ್ 4 ರನ್ ಹಾಗೂ ಜೋಸ್ ಬಟ್ಲರ್ 19 ರನ್ ಸಿಡಿಸಿ ಔಟ್ ಆದರು. ಅತ್ತ ರಾಜಸ್ಥಾನ್ ತಂಡದ ಹೊಡಿಬಡಿ ಆಟಗಾರನಾಗಿದ್ದ ರಿಯಾನ್ ಪರಾಗ್ 22 ಎಸೆತದಲ್ಲಿ 27 ರನ್ ಸಿಡಿಸಿದರೆ, ಶುಭಂ ದುಬೆ 25 ರನ್ ಸಿಡಿಸಿ ವಿಕೆಟ್ ಒಪ್ಪಿಸಿದರು. ಆದರೆ ಒಂದೆಡೆ ನಾಯಕ ಸಂಜು ಸ್ಯಾಮ್ಸನ್ ಮಾತ್ರ ಉತ್ತಮವಾಗಿ ಬ್ಯಾಟಿಂಗ್ ಮಾಡುವ ಮೂಲಕ ಶತಕದ ಹೊಸ್ತಿಲಲ್ಲಿ ವಿಕೆಟ್ ಒಪ್ಪಿಸಿದರು. ಈ ವೇಳೆ ಸಂಜು 46 ಎಸೆತದಲ್ಲಿ 6 ಸಿಕ್ಸ್ ಮತ್ತು 8 ಬೌಂಡರಿ ಸಹಿತ 86 ರನ್ ಸಿಡಿಸಿದರು.

ಆರಂಭದಲ್ಲಿ ಜಾಕ್ ಫ್ರೇಸರ್ ಮೆಕ್ ಗ್ರೂಕ್ ಅವರ ಬ್ಯಾಟಿಂಗ್ ಅಬ್ಬರದ ನಂತರ ಅಭಿಷೇಕ್ ಪೊಡೆಲ್ ಅವರ ಬ್ಯಾಟಿಂಗ್ ಮೂಲಕ ಡೆಲ್ಲಿ ಕ್ಯಾಪಿಟಲ್ಸ್ ಬೃಹತ್ ಮೊತ್ತ ಕಲೆಹಾಕಿತು. ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ನಡೆದ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಜಸ್ಥಾನ್ ರಾಯಲ್ಸ್ ನಡುವಿನ ಮಾಡು ಇಲ್ಲವೇ ಮಡಿ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ಮೊದಲು ಬ್ಯಾಟಿಂಗ್ ಮಾಡುವ ಮೂಲಕ ನಿಗದಿತ 20 ಓವರ್‌ಗೆ 222 ರನ್‌ಗಳ ಬೃಹತ್ ಮೊತ್ತವನ್ನು ಕಲೆಹಾಕಿದರು. ಈ ಬೃಹತ್ ಮೊತ್ತದ ಟಾರ್ಗೆಟ್ ಬೆನ್ನಟ್ಟಿದ ರಾಜಸ್ಥಾನ್ ರಾಯಲ್ಸ್ ತಂಡವು ನಿಗದಿತ 20 ಓವರ್ ಗೆ 8 ವಿಕೆಟ್ ನಷ್ಟಕ್ಕೆ 201 ರನ್ ಗಳಿಸುವ ಮೂಲಕ 20 ರನ್ ಗಳಿಂದ ಸೋಲನ್ನಪ್ಪಿದೆ. ರಾಜಸ್ಥಾನ್ ರಾಯಲ್ಸ್ ಸೋಲುವ ಮೂಲಕ ಮತ್ತೊಮ್ಮೆ ಪ್ಲೇಆಫ್‌ಗಾಗಿ ಕಾಯಬೇಕಿದೆ.




ಮೆಕ್‌ಗ್ರೂಕ್ ಆರಂಭದಿಂದಲೂ ಅಬ್ಬರದ ಬ್ಯಾಟಿಂಗ್ ಮೂಲಕ ಅಬ್ಬರಿಸಿದರು. ರಾಜಸ್ಥಾನದ ಬೌಲರ್‌ಗಳಿಗೆ ಆರಂಭದಲ್ಲಿಯೇ ಬೆವರಿಳಿಸಿದರು. ಮೆಕ್ ಗ್ರೂಕ್ 4 ಓವರ್‌ಗಳಲ್ಲಿ ತಂಡದ ಸ್ಕೋರನ್ನು 60 ರನ್‌ಗಳಿಗೆ ಕೊಂಡೊಯ್ದರು. 19 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಆದರೆ 50 ರನ್ ಗಳಿಸಿ ಔಟಾದರು. ಇದಾದ ಬಳಿಕ ಅಭಿಷೇಕ್ ಒಂದು ಕಡೆಯಿಂದ ಆಕ್ರಮಣಕಾರಿ ಬ್ಯಾಟಿಂಗ್ ಮುಂದುವರಿಸಿದರು. ಆದರೆ ಉತ್ತಮ ಆರಂಭದ ಹೊರತಾಗಿಯೂ ಆರಂಭಿಕ ಜೋಡಿ ಮುರಿಯುತ್ತಿದ್ದಂತೆ ಡೆಲ್ಲಿ ನಿಯಮಿತ ಅಂತರದಲ್ಲಿ ವಿಕೆಟ್ ಕಳೆದುಕೊಳ್ಳುತ್ತಲೇ ಇತ್ತು. ರನ್ ರೇಟ್ ಉತ್ತಮವಾಗಿದ್ದರೂ ಶಾಯ್ ಹೋಪ್ 1, ರಿಷಬ್ ಪಂತ್ 15 ರನ್ ಮತ್ತು ಅಕ್ಷರ್ ಪಟೇಲ್ 15 ರನ್ ಗಳಿಸಿ ಔಟಾದರು. ಮತ್ತೊಂದೆಡೆ ಅಭಿಷೇಕ್ ಪೊಡೆಲ್ ಅರ್ಧಶತಕ ದಾಖಲಿಸಿದರು. ಅಂತಿಮವಾಗಿ ಫೆರೆಮ್ ಸಜ್ಜರ್‌ನಲ್ಲಿ 36 ಎಸೆತಗಳಲ್ಲಿ 65 ರನ್ ಗಳಿಸಿ ತಂಡದ ಮೊತ್ತ 200ರ ಗಡಿ ದಾಟಿಸಲು ಸಹಾಯಕರಾದರು. ಸ್ಟಬ್ಸ್ ಆಕ್ರಮಣಕಾರಿ ಬ್ಯಾಟಿಂಗ್ ಮೂಲಕ ತಂಡದ ಸ್ಕೋರ್ ಬೋರ್ಡ್ ಹೆಚ್ಚಿಸಿದರು.

### ಮತ್ತೆ ಅಬ್ಬರಿಸಿದ ಆಸೀಸ್ ಯುವ ಆಟಗಾರ

**ಆರಂಭದಿಂದಲೇ ಬ್ಯಾಟಿಂಗ್ ಮೂಲಕ ಅಬ್ಬರಿಸಿದ ಡೆಲ್ಲಿ ಕ್ಯಾಪಿಟಲ್ಸ್ ತಂಡದ ಯುವ ಆಟಗಾರ ಜಾಕ್ ಫ್ರೇಸರ್ ಮೆಕ್‌ಗ್ರೂಕ್ ಮತ್ತೊಮ್ಮೆ ವೇಗವಾಗಿ ಅರ್ಧಶತಕ ಸಿಡಿಸಿ ಅಬ್ಬರಿಸಿದರು. ಮೆಕ್ ಗ್ರಾಕ್ 20 ಎಸೆತಗಳಲ್ಲಿ 50 ರನ್ ಗಳಿಸಿದರು. ಬಂಗಾಳದ ಹುಡುಗ ಅಭಿಷೇಕ್ ಪೊಡೆಲ್ ಡೆಲ್ಲಿ ಪರ 36 ಎಸೆತಗಳಲ್ಲಿ 65 ರನ್ ಗಳಿಸಿ ಗರಿಷ್ಠ ಇನ್ನಿಂಗ್ಸ್ ಆಡಿದರು. ಟ್ರಿಸ್ಟಾನ್ ಸ್ಟಬ್ಸ್ 20 ಎಸೆತಗಳಲ್ಲಿ 41 ರನ್ ಗಳಿಸಿದರು. ಇನ್ನು, ರಾಜಸ್ಥಾನ್ ರಾಯಲ್ಸ್ ಟಾಸ್ ಗೆದ್ದು ಬೌಲಿಂಗ್ ಮಾಡಲು ನಿರ್ಧರಿಸಿತು. ಜಾಕ್ ಫ್ರೇಸರ್ ಮೆಕ್‌ಗ್ರೂಕ್ ಮತ್ತು ಬಂಗಾಳದ ಹುಡುಗ ಅಭಿಷೇಕ್ ಡೆಲ್ಲಿ ಕ್ಯಾಪಿಟಲ್ಸ್‌ಗೆ ಆರಂಭಿಕ ಜೋಡಿಯಲ್ಲಿ ಶುಭಾರಂಭ ಮಾಡಿದರು.**

# ಕೊಹ್ಲಿಯನ್ನು ಎದುರಿಸಲು ಪ್ಲ್ಯಾನ್ ರೆಡಿ ಇದೆ

ಆಧುನಿಕ ಯುಗದ ಶ್ರೇಷ್ಠ ಬ್ಯಾಟರ್‌ಗಳಲ್ಲಿ ಒಬ್ಬರಾಗಿರುವ ವಿರಾಟ್ ಕೊಹ್ಲಿ ಯಾವಾಗಲೂ ಪಾಕಿಸ್ತಾನ ವಿರುದ್ಧ ಅದ್ಭುತ ಪ್ರದರ್ಶನ ನೀಡುತ್ತಾರೆ. ಹೀಗಾಗಿ ಅವರಿಗಾಗಿ ವಿಶೇಷ ರಣ ತಂತ್ರ ರೂಪಿಸುತ್ತಿದ್ದಾರೆ. ಕೊಹ್ಲಿ ಸಾಂಪ್ರದಾಯಿಕ ಎದುರಾಳಿಗಳ ವಿರುದ್ಧ ಇನ್ನೂ ಟೆಸ್ಟ್ ಪಂದ್ಯಗಳನ್ನು ಆಡಿಲ್ಲ. ಆದರೆ, ವೈಟ್-ಬಾಲ್ ಸ್ವರೂಪಗಳಲ್ಲಿ ಅದ್ಭುತ ದಾಖಲೆ ಹೊಂದಿದ್ದಾರೆ. ಹಾಗೆಯೇ ಮುಂದಿನ ಟಿ20 ವಿಶ್ವ ಕಪ್‌ನಲ್ಲಿಯೂ ಪಾರಮ್ಯ ಸಾಧಿಸುವ ಯೋಜನೆ ಹೊಂದಿದ್ದಾರೆ. ಪಾಕಿಸ್ತಾನ ವಿರುದ್ಧ 16 ಏಕದಿನ ಪಂದ್ಯಗಳನ್ನಾಡಿರುವ ವಿರಾಟ್ ಕೊಹ್ಲಿ 52.15ರ ಸರಾಸರಿಯಲ್ಲಿ 678 ರನ್ ಗಳಿಸಿದ್ದಾರೆ. ಟಿ20ನಲ್ಲಿ ಪಾಕಿಸ್ತಾನ ವಿರುದ್ಧ ಕೊಹ್ಲಿಯ ಪ್ರಾಬಲ್ಯವು ಪರಿಣಾಮಕಾರಿಯಾಗಿದೆ. ಅವರು 10 ಪಂದ್ಯಗಳಲ್ಲಿ 81.33 ಸರಾಸರಿಯಲ್ಲಿ 488 ರನ್ ಗಳಿಸಿದ್ದಾರೆ ಮತ್ತು ಐದು ಅರ್ಧಶತಕಗಳೊಂದಿಗೆ 123.85 ಸ್ಟ್ರೈಕ್ ರೇಟ್ ಹೊಂದಿದ್ದಾರೆ. ಜೂನ್ 9 ರಂದು ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ಐಸಿಸಿ ಪುರುಷರ ಟಿ20 ವಿಶ್ವಕಪ್ 2024 ರಲ್ಲಿ ಭಾರತ ಮತ್ತು ಪಾಕಿಸ್ತಾನ ಮುಖಾಮುಖಿಯಾಗಲಿದ್ದು, ಮತ್ತೊಮ್ಮೆ ತಂಡಕ್ಕಾಗಿ ಪ್ರದರ್ಶನ ನೀಡುವ ಜವಾಬ್ದಾರಿ ಕೊಹ್ಲಿ ಹೆಗಲ ಮೇಲಿದೆ. ಇದು ಪಾಕಿಸ್ತಾನ ತಂಡದ ಚಿಂತೆಯನ್ನು ಹೆಚ್ಚಳ ಮಾಡಿದೆ. ಆದರೆ, ವಿರಾಟ್ ತಮಗೆ ಏನೂ ಆಗಿಲ್ಲ ಎಂಬುದಾಗಿ ಹೇಳಿದ್ದಾರೆ. ಜತೆಗೆ ಕೊಹ್ಲಿಗಾಗಿ ರಣ ತಂತ್ರ ರೆಡಿಯಾಗಿದೆ ಎಂಬುದಾಗಿಯೂ ನುಡಿದಿದ್ದಾರೆ.

**ಎಲ್ಲಾರಿಗೂ ಇದೆ ಯೋಜನೆ:** ಒಂದು ತಂಡವಾಗಿ ನೀವು ಯಾವಾಗಲೂ ವಿಭಿನ್ನ ತಂಡಗಳ ವಿರುದ್ಧ ಮತ್ತು ಅವರ ಸಾಮರ್ಥ್ಯಕ್ಕೆ ಅನುಗುಣವಾಗಿ ಯೋಜಿಸುತ್ತೀರಿ. ನಾವು ಕೇವಲ ಒಬ್ಬ ಆಟಗಾರನ ವಿರುದ್ಧ ಏನನ್ನೂ ಯೋಜಿಸುವುದಿಲ್ಲ. ನಾವು ಎಲ್ಲಾ 11 ಆಟಗಾರರಿಗಾಗಿ ಯೋಜಿಸಿದ್ದೇವೆ. ನ್ಯೂಯಾರ್ಕ್‌ನ ಪರಿಸ್ಥಿತಿಗಳ ಬಗ್ಗೆ ನಮಗೆ ಹೆಚ್ಚು ತಿಳಿದಿಲ್ಲ ನಾವು ಅದಕ್ಕೆ ಅನುಗುಣವಾಗಿ ಯೋಜಿಸುತ್ತೇವೆ. ವಿರಾಟ್ ಕೊಹ್ಲಿ ಅತ್ಯುತ್ತಮ ಆಟಗಾರರಲ್ಲಿ ಒಬ್ಬರು. ನಾವು ಅವರ ವಿರುದ್ಧವೂ ಯೋಜನೆಗಳನ್ನು ಇಟ್ಟುಕೊಂಡಿದ್ದೇವೆ ಎಂದು ಐರ್ಲೆಂಡ್ ಪ್ರವಾಸಕ್ಕೆ ಮುಂಚಿತವಾಗಿ ಪತ್ರಿಕಾಗೋಷ್ಠಿಯಲ್ಲಿ ಬಾಬರ್ ಹೇಳಿದರು. ಮೆಲ್ಬೋರ್ನ್ ಕ್ರಿಕೆಟ್ ಮೈದಾನದಲ್ಲಿ ನಡೆದ 2022 ರ ಆವೃತ್ತಿಯ ಟಿ 20 ವಿಶ್ವಕಪ್‌ನಲ್ಲಿ ಪಾಕಿಸ್ತಾನ ವಿರುದ್ಧ ಭಾರತದ ಗೆಲುವಿನಲ್ಲಿ ವಿರಾಟ್ ಕೊಹ್ಲಿ ಮುಂಚೂಣಿ ಪಾತ್ರ ವಹಿಸಿದ್ದರು. 160 ರನ್‌ಗಳ ಗುರಿ ಬೆನ್ನತ್ತಿದ ಮೆನ್ ಇನ್ ಬ್ಲೂ ತಂಡ 6.1 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 31 ರನ್ ಗಳಿಸಿತು. ಒತ್ತಡದ ಪರಿಸ್ಥಿತಿಯ ನಡುವೆ, ಕೊಹ್ಲಿ 53 ಎಸೆತಗಳಲ್ಲಿ 82★ ರನ್ ಗಳಿಸಿದ್ದರು. ಮತ್ತು ಹಾರ್ದಿಕ್ ಪಾಂಡ್ಯ (37 ಎಸೆತಗಳಲ್ಲಿ 40 ರನ್) ಅವರೊಂದಿಗೆ 113 ರನ್‌ಗಳ ಜೊತೆಯಾಟವನ್ನು ಹಂಚಿಕೊಂಡಿದ್ದರು.




# ಧೋನಿಗೆ ಗಾಯ, ಆಂತರಿಕ ಮಾಹಿತಿ ಬಹಿರಂಗ

ಹೊಸ ನಾಯಕ ಋತುರಾಜ್ ಗಾಯಕ್ವಾಡ್ ಅವರ ನಾಯಕತ್ವದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಪ್ರಸ್ತುತ ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) ನಲ್ಲಿ ಪ್ರಶಂಸನೀಯ ಅಭಿಯಾನ ನಡೆಸುತ್ತಿದೆ. ತಂಡವು ಹನ್ನೊಂದು ಪಂದ್ಯಗಳಲ್ಲಿ 6 ಪಂದ್ಯಗಳನ್ನು ಗೆದ್ದಿದೆ ಮತ್ತು 12 ಅಂಕಗಳೊಂದಿಗೆ ಪ್ರಸ್ತುತ ಪಾಯಿಂಟ್ಸ್ ಟೇಬಲ್‌ನಲ್ಲಿ ಮೂರನೇ ಸ್ಥಾನದಲ್ಲಿದೆ. ಹೀಗಾಗಿ ಪ್ಲೇಆಫ್‌ಗೆ ಪ್ರವೇಶ ಪಡೆಯುವ ಎಲ್ಲಾ ಅವಕಾಶಗಳನ್ನು ಹೊಂದಿದೆ. ಆದರೆ, ಧೋನಿಗೂ ಗಾಯವಾಗಿದೆ ಎಂಬ ವಿಚಾರ ಆ ಬಳಗವನ್ನು ಆತಂಕ್ಕೆ ತಳ್ಳಿದೆ. 'ಯೆಲ್ಲೋ ಆರ್ಮಿ' ಗೆ ಪೂರಕವಾಗಿರದ ವಿಷಯವೆಂದರೆ ಗಾಯದ ಸಮಸ್ಯೆಗಳು. ಋತುರಾಜ್ ನೇತೃತ್ವದ ಶಿಬಿರವು ಈ ಋತುವಿನಲ್ಲಿ ಗಾಯಗಳ ಸರಮಾಲೆಯನ್ನು ಎದುರಿಸುತ್ತಿದೆ. ಪಂದ್ಯಾವಳಿಯ ಆರಂಭಿಕ ಹಂತದಲ್ಲಿ, ಅವರು ಗಾಯಗೊಂಡ ಡೆವೊನ್ ಕಾನ್ವೇ ಅವರನ್ನು ಕಳೆದುಕೊಂಡಿದ್ದರು. ನಂತರ ದೀಪಕ್ ಚಾಹರ್, ಮಥೀಶಾ ಪತಿರಾನಾ ಅವರ ಸೇವೆಯಿಂದ ವಂಚಿತವಾಯಿತು. ಬಳಿಕ ಮುಸ್ತಾಫಿಜುರ್ ರಹಮಾನ್ ಪಂದ್ಯಾವಳಿಯ ಎರಡನೇ ಹಂತದಲ್ಲಿ ಗಾಯದಿಂದಾಗಿ ಐಪಿಎಲ್ 2024 ರಿಂದ ಹೊರಗುಳಿದಿದ್ದರು. ನಂತರ ತಂಡಕ್ಕೆ ಪ್ರವೇಶ ಪಡೆದರೂ ರಾಷ್ಟ್ರೀಯ ಬದ್ಧತೆಗಾಗಿ ತವರಿಗೆ ಮರಳಿದ್ದರು.


ಮಹತ್ವದ ಬೆಳವಣಿಗೆಯೊಂದರಲ್ಲಿ, ಎಂಎಸ್ ಧೋನಿ ಪ್ರಸ್ತುತ ನಡೆಯುತ್ತಿರುವ ಐಪಿಎಲ್ ಸಮಯದಲ್ಲಿ ಸ್ವಲ್ಪ ಸಮಯದವರೆಗೆ ಗಾಯವನ್ನು ಎದುರಿಸಿದರು. ಆದರೆ ಲೆಜೆಂಡರಿ ಕ್ರಿಕೆಟಿಗ ಆಟವನ್ನು ಮುಂದುವರಿಸಲು ನಿರ್ಧರಿಸಿದ್ದಾರೆ ಮತ್ತು ವಿರಾಮ ತೆಗೆದುಕೊಳ್ಳದಿರಲು ನಿರ್ಧರಿಸಿದ್ದಾರೆ ಎಂಬುದಾಗಿ ವರದಿಯಾಗಿದೆ. ಧೋನಿಗೆ ಆಗಿರುವ ಗಾಯದ ಕಾರಣ ಇನ್ನೂ ತಿಳಿದುಬಂದಿಲ್ಲ. ಆದರೆ ವೈದ್ಯರು ಧೋನಿಗೆ ವಿಶ್ರಾಂತಿ ತೆಗೆದುಕೊಳ್ಳುವಂತೆ ಸಲಹೆ ನೀಡಿದ್ದಾರೆ ಎಂಬುದಾಗಿ ಹೇಳಲಾಗಿದೆ. ಸಿಎಸ್‌ಕೆ ಮಾಜಿ ನಾಯಕನಿಗೆ ಐಪಿಎಲ್‌ನಿಂದ ವಿರಾಮ ತೆಗೆದುಕೊಳ್ಳಲು ಬಯಸಿಲ್ಲ. , ಬದಲಿಗೆ, ಪಂದ್ಯಾವಳಿಯ ಉಳಿದ ಭಾಗಕ್ಕೆ ಲಭ್ಯವಿರುವುದನ್ನು ಖಚಿತಪಡಿಸಿಕೊಳ್ಳಲು ಅವರು ಔಷಧಗಳ ಮೂಲಕ ನೋವಿನಿಂದ ಮುಕ್ತಿ ಪಡೆಯುತ್ತಿದ್ದಾರೆ ಎಂದು ಹೇಳಲಾಗಿದೆ.



ಆಟಕ್ಕೆ ಬದ್ಧತೆ: ಎಂಎಸ್ ಧೋನಿ ಗಾಯವನ್ನು ಎದುರಿಸುವ ಬದಲು ತಮ್ಮ ಆಟ ಮುಂದುವರಿಸಲು ಬಯಸುತ್ತಾರೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ. ಸಿಎಸ್‌ಕೆ ಮಾಜಿ ನಾಯಕ ಈ ಪ್ರಸ್ತುತ ಐಪಿಎಲ್ ಋತುವಿನಲ್ಲಿ ಈ ಗಾಯವನ್ನು ಎದುರಿಸಿದ್ದಾರೆ. ಆದರೆ ದಂತಕಥೆ ನೋವಿನ ನಡುವೆಯೂ ಆಡಲು ಹಠಮಾರಿ ಮತ್ತು ದೃಢನಿಶ್ಚಯ ತೆಗೆದುಕೊಂಡಿರುವುದು ಅಚ್ಚರಿ. ಐಪಿಎಲ್ ಪ್ರಾರಂಭವಾದಾಗಿನಿಂದ ಎಂಎಸ್ ಧೋನಿ ಚರ್ಚೆಯ ವಿಷಯವಾಗಿದ್ದಾರೆ. ಈ ಆಟಗಾರ ಕೆಲವೊಂದು ಬಾರಿ ಗಮನಾರ್ಹ ಫಾರ್ಮ್ ತೋರಿದ್ದಾರೆ. ಆದರೆ ತೀರಾ ಕೆಳ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಲು ಬರುತ್ತಿದ್ದಾರೆ. ಇತ್ತೀಚೆಗೆ ಸಿಎಸ್‌ಕೆ ವಿರುದ್ಧದ ಪಂದ್ಯದಲ್ಲಿ ಧೋನಿ 9 ನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಲು ಬಂದರು. ಈ ಕ್ರಮವನ್ನು ಭಾರತದ ಮಾಜಿ ಕ್ರಿಕೆಟಿಗರು ತೀವ್ರವಾಗಿ ಟೀಕಿಸಿದರು. ಎಂಎಸ್ ಧೋನಿ ಅವರ ಬ್ಯಾಟಿಂಗ್ ಕ್ರಮಾಂಕವು ಸಿಎಸ್‌ಕೆ ಯಾವುದೇ ರೀತಿಯಲ್ಲಿ ಸಹಾಯ ಮಾಡುತ್ತಿಲ್ಲ ಎಂದು ಇರ್ಫಾನ್ ಪಠಾಣ್ ಹೇಳಿದ್ದಾರೆ. ಹರ್ಭಜನ್ ಸಿಂಗ್ ಸಿಎಸ್‌ಕೆ ಹೆಚ್ಚುವರಿ ಬ್ಯಾಟರ್ ಮೂಲಕ ಆಡಬಹುದು ಎಂದು ಸಲಹೆ ನೀಡಿದೆ. ಧೋನಿಯು ಅನುಭವಿಸುತ್ತಿರುವ ಗಾಯದ ಬಗ್ಗೆ ನಿಜವಾದ ವಿಚಾರ ಯಾರಿಗೂ ತಿಳಿದಿರಲಿಲ್ಲ.

# ಪವನ್ ಕಲ್ಯಾಣ್‌ಗಾಗಿ ಕೊನೆಗೂ ಅಖಾಡಕ್ಕೆ ಇಳಿದ ನಟ ಚಿರಂಜೀವಿ

ಆಂಧ್ರಪ್ರದೇಶದಲ್ಲಿ ಚುನಾವಣೆ ಕಾವು ಜೋರಾಗಿದೆ. ದಿನಕ್ಕೊಂದು ತಿರುವನ್ನೂ ಅದು ಪಡೆದುಕೊಳ್ಳುತ್ತಿದೆ. ಅದರಲ್ಲೂ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಸೋಲಿಗಾಗಿ ಸರ್ವ ಪಕ್ಷಗಳು ಒಂದಾಗಿವೆ. ಮೈತ್ರಿ ಪಕ್ಷಗಳನ್ನು ಬಲ ಪಡಿಸೋಕೆ ಏನೆಲ್ಲ ಕಸರತ್ತುಗಳನ್ನು ಮಾಡಲಾಗುತ್ತಿದೆ. ಜಗನ್ ಮೋಹನ್ ರೆಡ್ಡಿ ಪಕ್ಷವನ್ನು ಸೋಲಿಸಲು ಒಂದು ಕಡೆ ಪವನ್ ಕಲ್ಯಾಣ್ ನೇತೃತ್ವದ ಜನಸೇನಾ) ಟೊಂಕ ಕಟ್ಟಿ ನಿಂತಿದ್ದರೆ, ಅದರ ಬೆಂಬಲಕ್ಕೆ ಹೆಸರಾಂತ ನಟ ಚಿರಂಜೀವಿ ಇರುವುದಾಗಿ ಘೋಷಣೆ ಮಾಡಿದ್ದಾರೆ. ಪವನ್ ಕಲ್ಯಾಣ್ ಬೆಂಬಲ ಕುರಿತಂತೆ ವಿಡಿಯೋವೊಂದನ್ನು ಮಾಡಿರುವ ಚಿರಂಜೀವಿ, ಒಳ್ಳೆಯ ಆಡಳಿತಕ್ಕಾಗಿ ಜನಸೇನಾ ಮತ್ತು ಮೈತ್ರಿಕೂಟವನ್ನು ಬೆಂಬಲಿಸುತ್ತಿರುವುದಾಗಿ ಅವರು ಹೇಳಿಕೊಂಡಿದ್ದಾರೆ. ಅಗತ್ಯವಿದ್ದರೆ ಪವನ್ ಕಲ್ಯಾಣ್ ಮತ್ತು ಅವರ ಪಕ್ಷದ ಪರವಾಗಿಯೂ ಪ್ರಚಾರಕ್ಕೆ ಬರುವುದಾಗಿ ಅವರು ಹೇಳಿಕೊಂಡಿದ್ದಾರೆ.



ಮೇ 13ರಂದು ಆಂಧ್ರಪ್ರದೇಶದ ಚುನಾವಣೆ ನಡೆಯುತ್ತಿದೆ. ಪವನ್ ಕಲ್ಯಾಣ್ ಪೀಠಾಪುರಂ ವಿಧಾನಸಭಾ ಕ್ಷೇತ್ರದಿಂದ ಸ್ಪರ್ಧಿಸಿದ್ದಾರೆ. ಈಗಾಗಲೇ ಮತದಾರನ ಒಲವು ಪವನ್ ಕಲ್ಯಾಣ್ ಕಡೆ ಇದೆ ಎಂದು ಹೇಳಲಾಗುತ್ತಿದೆ. ನಟ ನಾನಿ ಸೇರಿದಂತೆ ಸಾಕಷ್ಟು ಕಲಾವಿದರು ಮತ್ತು ತಂತ್ರಜ್ಞರು ಪವನ್ ಕಲ್ಯಾಣ್ ಪರ ಮತಯಾಚನೆ ಮಾಡುವ ಇಂಗಿತವನ್ನೂ ವ್ಯಕ್ತ ಪಡಿಸಿದ್ದಾರೆ. ಈ ಚುನಾವಣೆ ನಿಜಕ್ಕೂ ರಂಗೇರಿದೆ.


# ಸಮಂತಾ ಬೆತ್ತಲೆ ಫೋಟೋ ಪ್ರತಿಕ್ರಿಯೆ ನೀಡಿದ ನಟಿ ಸಮಂತಾ

ಒಂದಿಲ್ಲೊಂದು ಕಾರಣಕ್ಕಾಗಿ ಸಮಂತಾ ಸದಾ ಸುದ್ದಿಯಲ್ಲಿರುತ್ತಾರೆ. ತಾವು ಮಾಡಿದ ತಪ್ಪಿಗೆ ಸುದ್ದಿ ಆಗೋದು ಸಹಜ. ಮಾಡದೇ ಇರೋ ತಪ್ಪಿಗೂ ಬಲಿಯಾಗುತ್ತಾರೆ. ಅಂಥದ್ದೇ ಒಂದು ಬಲಿಪಶು ಸ್ಟೋರಿ ಬೆತ್ತಲೇ ಫೋಟೋದ್ದು. ಸಮಂತಾ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಬೆತ್ತಲೆ ಫೋಟೋ ಹಾಕಿದ್ದಾರೆ ಎನ್ನುವ ವಿಚಾರ ನಿನ್ನೆಯಿಂದ ಭರ್ಜರಿ ಸೇಲ್ ಆಗಿತ್ತು. ಡಿವೋರ್ಸ್ ನಂತರ ಸಮಂತಾ ಯಾಕೆ ಹೀಗೆ ಆದರು ಎನ್ನುವ ಪ್ರಶ್ನೆಯನ್ನೂ ಹಲವರು ಮಾಡಿದ್ದರು. ಬೆತ್ತಲೇ ಫೋಟೋ ಹಾಕಿ, ಯಾಕೆ ಡಿಲಿಟ್ ಮಾಡಿದರು ಎನ್ನುವ ಕುತೂಹಲ ಕೂಡ ಹಲವರದ್ದಾಗಿತ್ತು. ಅದು ಅವರೇ ಮಾಡಿದ್ದಾರಾ? ಅಥವಾ ಬೇರೆ ಯಾರಾದರೂ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ ಎನ್ನುವ ಚರ್ಚೆ ಕೂಡ ಮಾಡಲಾಯಿತು. ಈಗ ಸಮಂತಾ ಈ ಕುರಿತಂತೆ ಪರೋಕ್ಷವಾಗಿ ಪ್ರತಿಕ್ರಿಯೆ ನೀಡಿದ್ದಾರೆ. ನಮ್ಮದಲ್ಲದ ತಪ್ಪಿಗೆ ಅಥವಾ ಪ್ರತಿಕ್ರಿಯೆ ನೀಡಲು ಯೋಗ್ಯವಲ್ಲದಕ್ಕೆ ಪ್ರತಿಕ್ರಿಯೆ ನೀಡಬಾರದು ಎಂದು ಬರೆದುಕೊಂಡಿದ್ದಾರೆ. ಅಂದರೆ, ಅದು ತಮ್ಮಿಂದ ಆಗಿರುವ ತಪ್ಪಲ್ಲ. ಹಾಗಾಗಿ ಪ್ರತಿಕ್ರಿಯೆ ಅನಗತ್ಯ ಎಂದಿದ್ದಾರೆ.



# ದರ್ಶನ್ ಫ್ಯಾನ್ಸ್‌ಗೆ ಭರ್ಜರಿ ನ್ಯೂಸ್

ಡೆವಿಲ್ ಸಿನಿಮಾದ ಚಿತ್ರೀಕರಣ ವೇಳೆ ಕೈಗೆ ಏಟು ಮಾಡಿಕೊಂಡು ಆಸ್ಪತ್ರೆ ಪಾಲಾಗಿದ್ದ ನಟ ದರ್ಶನ್, ಶಸ್ತ್ರಚಿಕಿತ್ಸೆಯ ನಂತರ ಇದೀಗ ಸುಧಾರಿಸಿಕೊಂಡಿದ್ದಾರೆ. ಮತ್ತೆ ಚಿತ್ರೀಕರಣಕ್ಕೆ ಹೋಗಲು ರೆಡಿ ಕೂಡ ಆಗುತ್ತಿದ್ದರು. ಈ ಸಮಯದಲ್ಲಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೂಡ ಕೊಟ್ಟಿದ್ದಾರೆ. ಸಿನಿಮಾ ತಂಡವೇ ಪೋಸ್ಟರ್ ಬಿಡುಗಡೆ ಮಾಡಿದಂತೆ ಮೇ 10ಕ್ಕೆ ಡೆವಿಲ್ ಚಿತ್ರದ ಮೇಕಿಂಗ್ ವಿಡಿಯೋ ರಿಲೀಸ್ ಆಗಲಿದೆ. ಒಂದು ಸಿನಿಮಾ ಗೆದ್ದಾಕ್ಷಣ ಅದರ ಸಿಕ್ವೆಲ್ಗಾ ಡೋಕೆ ಹೊರಡೋದು ಸಾಮಾನ್ಯ ಸಂಗತಿಯಾಗಿದೆ. ಎಷ್ಟೋ ಸಿನಿಮಾಗಳು ಮೊದಲ ಚಿತ್ರ ಗೆದ್ದ ನಂತರವೇ ಭಾಗ 2 ಚಿತ್ರವನ್ನು ಮಾಡಿದ್ದೂ ಇದೆ. ಆದರೆ, ನಾನು ಆ ರೀತಿ ಮಾಡುವುದಿಲ್ಲ ಎಂದು ಹೇಳುವ ಮೂಲಕ ನಟ ದರ್ಶನ್ ಅಚ್ಚರಿ ಮೂಡಿಸಿದ್ದಾರೆ. ಕಾಟೇರ ಸಿನಿಮಾ ಸೂಪರ್ ಹಿಟ್ ಆಗಿದೆ. ಶತದಿನೋತ್ಸವ ಕೂಡ ಆಚರಿಸಿಕೊಂಡಿದೆ. ಹಾಗಾಗಿ ಕಾಟೇರ 2 ಸಿನಿಮಾ ಬರತ್ತಾ ಎನ್ನುವ ಕೆಟ್ಟ ಕುತೂಹಲ ಅವರ ಅಭಿಮಾನಿಗಳಲ್ಲಿ ಇತ್ತು. ಅದಕ್ಕೆ ದರ್ಶನ್ ಸ್ಪಷ್ಟನೆ ನೀಡಿದ್ದಾರೆ. ನಾನು ಗೆದ್ದಿತ್ತಿನ ಬಾಲ ಹಿಡಿಯೋದಿಲ್ಲ. ಹಾಗಾಗಿ ಕಾಟೇರ 2 ಬರಲ್ಲ ಅಂದಿದ್ದಾರೆ. ಕಾಟೇರ ಸಿನಿಮಾ ಕನ್ನಡದ ನೆಲದ ಸಿನಿಮಾ. 1970ರ ಕಾಲಘಟ್ಟದ ಕಥೆಯನ್ನು ಚೆಂದವಾಗಿ ತೆರೆಮೇಲೆ ತಂದಿದ್ದರು ನಿರ್ದೇಶಕ ತರುಣ್ ಸುಧೀರ್. ಮಾಲಾಶ್ರೀ ಪುತ್ರಿ ಆರಾಧನಾ ರಾಮ್ಗೂ ಕಾಟೇರ ದೊಡ್ಡ ಹಿಟ್ ನೀಡಿತ್ತು. ಕಥೆ ಬರೆದ ಜಡೇಶ್ ಕುಮಾರ್ ಹಂಪಿ, ಡೈಲಾಗ್ ಬರೆದ ಮಾಸ್ತಿಗೂ ಕಾಟೇರ ಸಿನಿಮಾ ಮರೆಯಲಾಗದ ಯಶಸ್ಸು ನೀಡಿತ್ತು. ಚಿತ್ರ ಶತದಿನೋತ್ಸವ ಕಂಡ ಬೆನ್ನಲ್ಲೇ ಬರಹಗಾರರಿಗೆ ನಿರ್ಮಾಪಕ ರಾಕ್ ಲೈನ್ ವೆಂಕಟೇಶ್ ಕಾರುಗಳನ್ನು ಉಡುಗೊರೆಯಾಗಿ ನೀಡಿದ್ದಾರೆ. ಈ ಹಿಂದೆ 'ಕಾಟೇರ' ಸಿನಿಮಾ ನೂರು ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ನಿರ್ದೇಶಕ ತರುಣ್ ಸುಧೀರ್ ಮತ್ತು ತಂಡ ಕೇಕ್ ಕತ್ತರಿಸಿ ಸಂಭ್ರಮಿಸಿತ್ತು.



# ಪುಷ್ಪ 2 ಚಿತ್ರದ ಬಗ್ಗೆ ಫಹಾದ್ ಹೇಳಿಕೆ

ಸೌತ್ ಸಿನಿ ರಂಗದಲ್ಲಿ ಗೆದ್ದು ಬೀಗಿದ ಸಿನಿಮಾ ಅಂದರೆ ಇತ್ತೀಚಿನ 'ಪುಷ್ಪ' ಚಿತ್ರ. ಇದರ ಸೀಕ್ವೆಲ್‌ಗಾಗಿ ಎಲ್ಲಾರೂ ಎದುರು ನೋಡ್ತಿದ್ದಾರೆ. ಇದರ ನಡುವೆ ನಟ ಫಹಾದ್ ಫಾಸಿಲ್ ಅವರು ಪುಷ್ಪ ಚಿತ್ರದ ಬಗ್ಗೆ ಅಚ್ಚರಿಯ ಹೇಳಿಕೆ ನೀಡಿದ್ದಾರೆ. 'ಪುಷ್ಪ' ನನ್ನ ವೃತ್ತಿ ಜೀವನಕ್ಕೆ ಏನೂ ಮಾಡಿಲ್ಲ ಎಂದು ಫಹಾದ್ ಮಾತನಾಡಿದ್ದಾರೆ. 'ಪುಷ್ಪ' ಚಿತ್ರದಿಂದ ನಿಮ್ಮ ಖ್ಯಾತಿ ಕೇರಳವನ್ನು ದಾಟಿ ಹೋಗಿದೆ ಇದು ನಿಮಗೆ ತಿಳಿದಿದೆಯೇ? ಎಂದು ನಿರೂಪಕಿ ಫಹಾದ್‌ಗೆ ಕೇಳಿದ್ದಾರೆ. ಅದಕ್ಕೆ ಅವರು ಇಲ್ಲ ಎಂದು ಪ್ರತಿಕ್ರಿಯೆ ನೀಡಿದ್ದಾರೆ. ಪುಷ್ಪ ನನ್ನ ವೃತ್ತಿ ಜೀವನಕ್ಕೆ ಏನನ್ನೂ ಮಾಡಿಲ್ಲ ಎಂದು ನಾನು ಭಾವಿಸುತ್ತೇನೆ. ನಾನು ಇದನ್ನು ಸುಕುಮಾರ್ ಅವರ ಎದುರು ಹೇಳುತ್ತೇನೆ. ಅದರಲ್ಲಿ ಮುಚ್ಚಿಡುವಂಥದ್ದು ಏನೂ ಇಲ್ಲ. ನಾನು ಪ್ರಾಮಾಣಿಕನಾಗಿರಬೇಕು. ನಾನು ಇಲ್ಲಿ ನನ್ನ ಕೆಲಸವನ್ನು ಮಾಡುತ್ತಿದ್ದೇನೆ. ನಾನು ಸುಕುಮಾರ್ ಸರ್ ಮೇಲಿನ ಪ್ರೀತಿಗೆ ಪುಷ್ಪ ಚಿತ್ರ ಮಾಡಿದೆ. ನನ್ನ ಕೆಲಸ ಮಲಯಾಳಂ ಚಿತ್ರರಂಗಕ್ಕೆ ಎಂದಿದ್ದಾರೆ.



ಪ್ಯಾನ್ ಇಂಡಿಯಾ ಸ್ಟಾರ್ ಎಂದು ಕರೆಯುವವರಿಗೆ ನಟ ಪ್ರತಿಕ್ರಿಯೆ ನೀಡಿದ್ದಾರೆ. ಇದನ್ನು ಅವರು ಒಪ್ಪಿಲ್ಲ. ನಾನು ಮಲಯಾಳಂ ನಟ. ಪ್ಯಾನ್ ಇಂಡಿಯಾಗೂ ನನಗೂ ಸಂಬಂಧವಿಲ್ಲ. ಸಿನಿಮಾ ಬಿಸ್ನೆಸ್ ಮಾಡಬೇಕು ನಿಜ ಆದರೆ, ಅದು ಸೆಕೆಂಡರಿ. ಇಲ್ಲಿ ಮಾಡುವ ರೀತಿಯ ಸಿನಿಮಾಗಳನ್ನು ನಾನು ಎಲ್ಲಿಯೂ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ.



# ಹೆಜ್ಜೇನು ದಾಳಿಗೆ ಜ್ಯೂನಿಯರ್ ಎನ್‌ಟಿಆರ್ ಟೀಮ್ ತತ್ತರ

ತೆಲುಗಿನ ಖ್ಯಾತ ನಟ ಜ್ಯೂನಿಯರ್ ಎನ್.ಟಿ.ಆರ್ ನಟನೆಯ ದೇವರ ಸಿನಿಮಾದ ಶೂಟಿಂಗ್ ವೈಜಾಗ್‌ನ ಕಾಡೊಂದರಲ್ಲಿ ನಡೆಯುತ್ತಿತ್ತು. ಈ ಸಮಯದಲ್ಲಿ ಹೆಜ್ಜೇನು ದಾಳಿ ನಡೆದಿದ್ದು, 20ಕ್ಕೂ ಹೆಚ್ಚು ಚಿತ್ರತಂಡದ ಸದಸ್ಯರು ಹೆಜ್ಜೇನು ದಾಳಿಗೆ ಗಾಯಗೊಂಡಿದ್ದಾರೆ. ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಅಕ್ಟೋಬರ್ 10 ರಂದು ದೇವರ ಸಿನಿಮಾ ವಿಶ್ವದಾದ್ಯಂತ ರಿಲೀಸ್ ಆಗುವ ಕಾರಣದಿಂದಾಗಿ ಬಿಡುವಿಲ್ಲದೇ ಚಿತ್ರತಂಡ ಶೂಟಿಂಗ್ ನಲ್ಲಿ ತೊಡಗಿದೆ. ಈ ಸಮಯದಲ್ಲಿ ಹೆಜ್ಜೇನು ದಾಳಿ ನಡೆದಿದೆ. ಈ ನಡುವೆ ದೇವರ ಸಿನಿಮಾ ಟೀಮ್ ನಿಂದ ಮತ್ತೊಂದು ಅಪ್ ಡೇಟ್ ಸಿಕ್ಕಿದ್ದು, ಈ ಸಿನಿಮಾವನ್ನು ಕನ್ನಡಕ್ಕೂ ಡಬ್ ಮಾಡಿ ರಿಲೀಸ್ ಮಾಡಲಾಗುತ್ತಿದೆ. ತಮ್ಮ ಪಾತ್ರಕ್ಕೆ ಕನ್ನಡದಲ್ಲಿ ಜ್ಯೂನಿಯರ್ ಅವರೇ ಡಬ್ ಮಾಡುವ ಸಾಧ್ಯತೆ ಇದೆ ಎನ್ನುವ ಮಾಹಿತಿಯೂ ಹರಿದಾಡುತ್ತಿದೆ. ಆರ್ ಆರ್ ಆರ್ ಚಿತ್ರದ ನಂತರ ಎನ್‌ಟಿಆರ್ ಅವರು ಕೊರಟಾಲ ಶಿವ ನಿರ್ದೇಶನದ ಈ ಚಿತ್ರದಲ್ಲಿ ನಟಿಸುತ್ತಿದ್ದಾರೆ. ಜ್ಯೂನಿಯರ್ ಹುಟ್ಟುಹಬ್ಬಕ್ಕೆ ಪೋಸ್ಟರ್ ರಿಲೀಸ್ ಮಾಡಲಾಗಿತ್ತು. ಆ ಪೋಸ್ಟರ್‌ನಲ್ಲಿ ಜ್ಯೂನಿಯರ್ ಎನ್.ಟಿ.ಆರ್ ಕಪ್ಪು ಬಣ್ಣದ ಲುಂಗಿ ಮತ್ತು ಶರ್ಟ್ ತೊಟ್ಟು, ಸಮುದ್ರದ ಬಂಡೆಗಳ ಮೇಲೆ ಕೊಡಲಿ ಹಿಡಿದು ನಿಂತು ತೀಕ್ಷ್ಣವಾಗಿ ನೋಡುತ್ತಿದ್ದಾರೆ. ಕಳೆಗೆ ಹೆಣಗಳ ರಾಶಿ ಇದೆ. ಪಕ್ಕದಲ್ಲಿ ಮುರಿದು ಬಿದ್ದ ದೋಣಿಯೊಂದನ್ನೂ ಕಾಣಬಹುದು. ಈ ಪೋಸ್ಟರ್ ಈಗಾಗಲೇ ಜ್ಯೂನಿಯರ್ ಎನ್.ಟಿ.ಆರ್ ಅವರ ಅಭಿಮಾನಿಗಳಲ್ಲಿ ಚಿತ್ರದ ಬಗ್ಗೆ ತೀವ್ರ ಕುತೂಹಲ ಮೂಡಿಸಿದ್ದು, ಅವರ ಮಾಸ್ ಲುಕ್ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿತ್ತು. 'ದೇವರ ಚಿತ್ರದ ಮೂಲಕ ಶ್ರೀದೇವಿ ಮಗಳು ಜಾಹ್ನವಿ ಕಪೂರ್ ಇದೇ ಮೊದಲ ಬಾರಿಗೆ ತೆಲುಗು ಚಿತ್ರರಂಗಕ್ಕೆ ಎಂಟ್ರಿ ಕೊಡುತ್ತಿದ್ದಾರೆ.

# ರಾಜಕೀಯಕ್ಕೆ ಬರುವ ಪ್ಲ್ಯಾನ್

ಅಕ್ರಮವಾಗಿ ಮಗು ದತ್ತು ಪಡೆದ ಪ್ರಕರಣದಲ್ಲಿ ಜೈಲು ಸೇರಿದ್ದ 'ಬಿಗ್ ಬಾಸ್' ಖ್ಯಾತಿಯ ಸೋನು ಶ್ರೀನಿವಾಸ್ ಗೌಡ ತಮ್ಮ ಮದುವೆ ಬಗ್ಗೆ ಮೌನ ಮುರಿದಿದ್ದಾರೆ. ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಮದುವೆ ಮತ್ತು ರಾಜಕೀಯಕ್ಕೆ ಎಂಟ್ರಿ ಕೊಡುವ ಬಗ್ಗೆ ನಟಿ ಮಾತನಾಡಿದ್ದಾರೆ. ಸದಾ ಸೋಷಿಯಲ್ ಮೀಡಿಯಾದಲ್ಲಿ ಆಕ್ಟೀವ್ ಇರುವ ನಟಿ ಇದೀಗ ಅಭಿಮಾನಿಗಳ ಜೊತೆ ಪ್ರಶ್ನಾವಳಿ ಮಾಡಿದ್ದಾರೆ. ಅವರು ಕೇಳುವ ಪ್ರಶ್ನೆಗಳಿಗೆ ಉತ್ತರಿಸಿದ್ದಾರೆ. ಅಭಿಮಾನಿಯೊಬ್ಬರು ನೀವು ಯಾವಾಗ ಮದುವೆಯಾಗುತ್ತೀರಾ? ಎಂದು ಸೋನುಗೆ ಪ್ರಶ್ನೆ ಕೇಳಿದ್ದಾರೆ. ಅದಕ್ಕೆ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಹಲವು ಪ್ರಶ್ನೆಗಳಿಗೆ ನಟಿ ಉತ್ತರಿಸಿದ್ದಾರೆ. ನಾನು ಮದುವೆ ಬಗ್ಗೆ ಪ್ಲ್ಯಾನ್ ಇಲ್ಲ. ನಾನು ಮದುವೆ ಆಗಬಾರದು ಎಂದುಕೊಂಡಿದ್ದೇನೆ ಎಂದಿದ್ದಾರೆ. ಚಿತ್ರರಂಗದಲ್ಲಿ ನಟಿಯಾಗಿ ಗುರುತಿಸಿಕೊಳ್ಳಬೇಕು ಎಂದು ಆಸಕ್ತಿ ಇತ್ತು. ಈಗ ಇಲ್ಲ, ಆದರೆ ರಾಜಕೀಯಕ್ಕೆ ಹೋಗಬೇಕು. ಅಲ್ಲಿ ಕಾಣಿಸಿಕೊಳ್ಳಬೇಕು ಎಂದು ಪ್ಲ್ಯಾನ್ ಇದೆ. ಮುಂದಿನ ದಿನಗಳಲ್ಲಿ ನೋಡೋಣ ಎಂದು ಸೋನು ಮಾತನಾಡಿದ್ದಾರೆ. 'ಕ್ಯಾಡ್ಬರಿಸ್' ಎಂಬ ಸಿನಿಮಾದಲ್ಲಿ ಸೋನು ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ. ಸ್ಪೆಷಲ್ ಹಾಡಿಗೆ ಹೆಜ್ಜೆ ಕೂಡ ಹಾಕಲಿದ್ದಾರೆ. ಸದ್ಯದಲ್ಲೇ ಸಿನಿಮಾ ಬಗ್ಗೆ ಹೆಚ್ಚಿನ ಮಾಹಿತಿ ಸಿಗಲಿದೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966